# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 92 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 18–10–2023 ಬುಧವಾರ | ಪುಟ: 4 | ಬೆಲೆ : ರೂ.2–00
Volume - 01 Issue - 92 | Title- Code: KARKAN 28269 | Chitradurga | Date 18-10-2023 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು

2.4 ಲಕ್ಷ ಮನೆ ಕಟ್ಟಿಸಿಕೊಡಲು ಸಿಎಂ ಒಪ್ಪಿಗೆ: ವಕ್ಫ್ ಸಚಿವ ಬಿ.ಜಡ್ ಜಮೀರ್‌ಅಹಮದ್ ಖಾನ್ 2

ಸಹಕಾರ ಸಂಘಗಳಿಗೆ ಇತ್ತೀಚೆಗೆ ತಿದ್ದುಪಡಿ ಆದ ಕಾಯ್ದೆ ಕಾನೂನಿನ ತಿಳುವಳಿಕೆ ಅಗತ್ಯ 3

ಬಡರೋಗಿಗಳಿಗೆ ಪ್ಯಾಕೇಜ್ ಒದಗಿಸಿದ ಕೀರ್ತಿ ಆಸ್ಪತ್ರೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ವಾಲ್ಮೀಕಿ, ರಾಣಿಚನ್ನಮ್ಮ, ಕನ್ನಡರಾಜ್ಯೋತ್ಸವ ಪೂರ್ವಬಾವಿ ಸಭೆ:ಶಾಸಕ ರಘುಮೂರ್ತಿ ಭಾಗಿ

» **ಚಳ್ಳಕೆರೆ**



ತಾಲ್ಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಾಗೂ ವಿವಿಧ ಸಮುದಾಯಗಳ ಸಂಘಟನೆ ವತಿಯಿಂದ ವೀರರಾಣಿ ಕಿತ್ತೂರು ರಾಣಿ ಚನ್ನಮ್ಮ, ಕನ್ನಡ ರಾಜ್ಯೋತ್ಸವ ಹಾಗೂ ಮಹರ್ಷಿಶ್ರೀವಾಲ್ಮೀಕಿಯವರ ಜಯಂತಿ ಕಾರ್ಯಕ್ರಮದ ಪೂರ್ವಭಾವಿ ಸಭೆಯನ್ನು ತಹಶೀಲ್ದಾರ್ ರೇಹಾನ್ ಪಾಷ ನೇತೃತ್ವದಲ್ಲಿ ಕರೆಯಲಾಗಿದೆ.

ಈ ಬಗ್ಗೆ ಮಾಹಿತಿ ನೀಡಿದ ತಾಲ್ಲೂಕು ಆಡಳಿತ, ಅ.18ರ ಬುಧವಾರ ಮಧ್ಯಾಹ್ನ 3 ಗಂಟೆಗೆ ಕಿತ್ತೂರು ರಾಣಿಚನ್ನಮ್ಮ ಜಯಂತಿ ಆಚರಣೆ ಕುರಿತು ಪೂರ್ವಭಾವಿ ಸಭೆ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ನಡೆಯಲಿದೆ. ಅ.19ರ ಗುರುವಾರ ಬೆಳಗ್ಗೆ 12ಕ್ಕೆ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದಲ್ಲಿ ಮಹರ್ಷಿಶ್ರೀ ವಾಲ್ಮೀಕಿ ಜಯಂತಿ ಪೂರ್ವಬಾವಿ ಸಭೆ, 12.30ಕ್ಕೆ ಕನ್ನಡ ರಾಜ್ಯೋತ್ಸವ ಆಚರಣೆ ಕುರಿತು ಪೂರ್ವಭಾವಿ ಸಭೆಯನ್ನುಹಮ್ಮಿಕೊಂಡಿದ್ದುಪೂರ್ವಬಾವಿಸಭೆಯ ಅಧ್ಯಕ್ಷತೆಯನ್ನು ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ವಹಿಸುವರು. ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಾಗೂ ವಿವಿಧ ಸಮುದಾಯಗಳ ಸಂಘಟನೆಗಳ ಸಹಕಾರದೊಂದಿಗೆ ನಡೆಯುವ ವಾಲ್ಮೀಕಿ ಸಮುದಾಯದ ಸಂಘಟನೆಗಳ ಮುಖಂಡರು, ಪ್ರತಿನಿಧಿಗಳು, ಕಾರ್ಯಕರ್ತರು, ಅಭಿಮಾನಿಗಳು ಸಭೆಯಲ್ಲಿ ಪಾಲ್ಗೊಂಡು ಸಲಹೆಸೂಚನೆಗಳನ್ನು ನೀಡಲು ಮನವಿ ಮಾಡಿದ್ದಾರೆ.

### ಹೊಸಪೇಟೆ ಅಬಕಾರಿ ವಿಭಾಗದ ಪ್ರಗತಿ ಪರಿಶೀಲನಾ ಸಭೆ

# ಗೋವಾದಿಂದ ಅಕ್ರಮ ಮದ್ಯ ಸಾಗಾಣಿಕೆ ಆಗುವುದನ್ನು ತಡೆಗಟ್ಟಿ: ಸಚಿವ ತಿಮ್ಮಾಪುರ

» **ಚಿತ್ರದುರ್ಗ**





ಗೋವಾದಿಂದ ಕರ್ನಾಟಕ ರಾಜ್ಯಕ್ಕೆ ರೈಲುಗಳ ಮೂಲಕ ಅಕ್ರಮವಾಗಿ ಮದ್ಯ ಸಾಗಾಣಿಕೆಯಾಗುವುದನ್ನು ತಡೆಗಟ್ಟಲು ಅಬಕಾರಿ ಅಧಿಕಾರಿಗಳು ತೀವ್ರ ಕಟ್ಟೆಚ್ಚರ ವಹಿಸಬೇಕು, ಇದಕ್ಕೆ ಅಗತ್ಯವಿದ್ದಲ್ಲಿ ರೈಲ್ವೆ ಪೊಲೀಸರ ಸಹಕಾರ ಪಡೆಯಬೇಕು ಎಂದು ಅಬಕಾರಿ ಸಚಿವ ಆರ್.ಬಿ. ತಿಮ್ಮಾಪುರ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಚಿತ್ರದುರ್ಗದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ಹೊಸಪೇಟೆ ಅಬಕಾರಿ ವಿಭಾಗ ವ್ಯಾಪ್ತಿಯ ಚಿತ್ರದುರ್ಗ, ದಾವಣಗೆರೆ, ವಿಜಯನಗರ, ಗದಗ, ಕೊಪ್ಪಳ ಮತ್ತು ಬಳ್ಳಾರಿ ಜಿಲ್ಲೆಗಳ ಅಬಕಾರಿ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹೊಸಪೇಟೆ ಅಬಕಾರಿ ವಿಭಾಗ ವ್ಯಾಪ್ತಿಯ ಜಿಲ್ಲೆಗಳಲ್ಲಿ ಈ ವರ್ಷ ಅಂದರೆ ಏಪ್ರಿಲ್ ನಿಂದ ಸೆಪ್ಟಂಬರ್ ವರೆಗೆ ಹೊರರಾಜ್ಯದ ಒಟ್ಟು 615.6 ಲೀ. ಅಕ್ರಮ ಮದ್ಯವನ್ನು ವಶಕ್ಕೆ ಪಡೆಯಲಾಗಿದೆ. ಗೋವಾ ರಾಜ್ಯದಿಂದ ರೈಲುಗಳ ಮೂಲಕ ಕರ್ನಾಟಕಕ್ಕೆ ಅಕ್ರಮವಾಗಿ ಮದ್ಯ ಸಾಗಾಣಿಕೆಯಾಗುತ್ತಿರುವ ಬಗ್ಗೆ ದೂರುಗಳಿವೆ, ಹೀಗಾಗಿ ಗೋವಾದಿಂದ ರಾಜ್ಯದೊಳಗೆ ರೈಲು ಅಥವಾ ಇನ್ನಿತರ ಮಾರ್ಗಗಳ ಮೂಲಕ ಅಕ್ರಮವಾಗಿ ಮದ್ಯ ಸಾಗಾಣಿಕೆಯಾಗುವುದಕ್ಕೆ ಕಡಿವಾಣ ಹಾಕುವ ಅಗತ್ಯವಿದೆ. ಗೋವಾ ರಾಜ್ಯದಿಂದ ರಾಜ್ಯಕ್ಕೆ ಆಗಮಿಸುವ ರೈಲುಗಳ ತಪಾಸಣೆ ಕಾರ್ಯ ಚುರುಕಾಗಬೇಕು, ಅಗತ್ಯವಿದ್ದಲ್ಲಿ ರೈಲ್ವೆ ಪೊಲೀಸರ ಸಹಕಾರ ಪಡೆಯಬೇಕು, ಆದರೆ ರೈಲಿನಲ್ಲಿ ಸ್ವಂತಕ್ಕಾಗಿ ಕೇವಲ ಒಂದೆರಡು ಬಾಟಲಿ ಮದ್ಯ ತೆಗೆದುಕೊಂಡು ಬರುವ ಪ್ರಯಾಣಿಕರಿಗೆ ತೊಂದರೆ ಕೊಡುವುದು ಬೇಡ, ಆದರೆ ಮಾರಾಟ ಉದ್ದೇಶ ಇಟ್ಟುಕೊಂಡು ಹೆಚ್ಚಿನ ಪ್ರಮಾಣದಲ್ಲಿ ಮದ್ಯ ಸಾಗಿಸಲು ಅವಕಾಶ ಮಾಡಿಕೊಡಬೇಡಿ ಎಂದು ಸಚಿವರು ಹೇಳಿದರು.

**ಜಪ್ತಿ ಮಾಡಿದ ವಾಹನಗಳ ತ್ವರಿತ ವಿಲೇವಾರಿಗೆ ಸೂಚನೆ :** ಅಬಕಾರಿ ಅಕ್ರಮ ಪ್ರಕರಣಗಳಿಗೆ ಸಂಬಂಧಿಸಿದಂತೆ ಹೊಸಪೇಟೆ ಅಬಕಾರಿ ವಿಭಾಗ ವ್ಯಾಪ್ತಿಯಲ್ಲಿ ಈ ವರ್ಷ ಒಟ್ಟು 441 ವಾಹನಗಳನ್ನು ವಶಕ್ಕೆ ಪಡೆಯಲಾಗಿದ್ದು, ಇದರಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡ 247 ವಾಹನಗಳನ್ನು ವಿಲೇವಾರಿ ಮಾಡುವುದು ಬಾಕಿ ಇದೆ ಎಂದು ಹೊಸಪೇಟೆ ಅಬಕಾರಿ ವಿಭಾಗದ ಜಂಟಿ ಆಯುಕ್ತ ಬಾಲಕೃಷ್ಣ ಅವರು ಸಭೆಯ ಗಮನಕ್ಕೆ ತಂದರು, ಇದಕ್ಕೆ ಪ್ರತಿಕ್ರಿಯಿಸಿದ ಸಚಿವ ಆರ್.ಬಿ. ತಿಮ್ಮಾಪುರ ಅವರು, ಅಬಕಾರಿ ಅಕ್ರಮ ಪ್ರಕರಣದಲ್ಲಿ ವಶಕ್ಕೆ ಪಡೆದ ಹಾಗೂ ಮುಟ್ಟುಗೋಲು ಹಾಕಿಕೊಂಡ ವಾಹನಗಳ ವಿಲೇವಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು, ವಿನಾಕಾರಣ ಇರಿಸಿಕೊಳ್ಳುವುದರಿಂದ ಯಾರಿಗೂ ಉಪಯೋಗವಿಲ್ಲ, ವಾಹನಗಳು ಮಳೆಗೆ ಸಿಲುಕಿ ಸಂಪೂರ್ಣ ಹಾಳಾಗುತ್ತವೆ, ಇದರಿಂದ ಅದರ ಮೌಲ್ಯವೂ ಕುಸಿದು, ವಾಹನಗಳ ಮಾಲೀಕರಿಗೆ ಹಾಗೂ ಸರ್ಕಾರಕ್ಕೂ ನಷ್ಟವೇ ಆಗುತ್ತದೆ. ಹೀಗಾಗಿ ತ್ವರಿತವಾಗಿ ವಾಹನಗಳ ವಿಲೇವಾರಿ ಮಾಡಲು ಯಾವುದಾದರೂ ನಿಯಮಗಳು ಅಡ್ಡಿಯಿದ್ದಲ್ಲಿ, ನಿಯಮಗಳಿಗೆ ತಿದ್ದುಪಡಿ ತಂದು, ಸರಳೀಕರಿಸಲಾಗುವುದು, ಒಟ್ಟಾರೆ ವಾಹನಗಳ ತ್ವರಿತ ವಿಲೇವಾರಿಯಾಗಬೇಕು, ಇದಕ್ಕೆ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಕೂಡ ಸಹಕಾರ ನೀಡಬೇಕಾಗುತ್ತದೆ ಎಂದರು.

**ಗಾಂಜಾ ಬೆಳೆಯುವುದನ್ನು ಮಟ್ಟಹಾಕಿ :** ಹೊಸಪೇಟೆ ವಿಭಾಗದಲ್ಲಿ ಈ ವರ್ಷ ಒಟ್ಟು 29 ಮಾದಕ ಪ್ರಕರಣಗಳು ವರದಿಯಾಗಿದ್ದು, 25 ಜನರನ್ನು ಬಂಧಿಸಲಾಗಿದೆ, ಅಲ್ಲದೆ ಈ ವರ್ಷ 15 ಜನರಿಗೆ ನ್ಯಾಯಾಲಯ ಶಿಕ್ಷೆ ವಿಧಿಸಿದೆ ಎಂದು ಅಬಕಾರಿ ಜಂಟಿ ಆಯುಕ್ತರು ತಿಳಿಸಿದರು.


ಪುಟ 2


# ಹೊಸ ಮದ್ಯದ ಅಂಗಡಿಗಳು ಬೇಡ

### ಇರುವ ಅಂಗಡಿಗಳಿಗೆ ಕಡಿವಾಣ ಹಾಕಿ: ಅಬಕಾರಿ ಸಚಿವರಿಗೆ ತರಳಬಾಳು ಶ್ರೀ ಸಲಹೆ

» **ಸಿರಿಗೆರೆ**



ರಾಜ್ಯದಲ್ಲಿ ಮತ್ತೆ 1000 ಮದ್ಯದ ಅಂಗಡಿಗಳನ್ನು ತೆರೆಯಲು ಸರ್ಕಾರ ಮುಂದಾಗಿರುವುದಾಗಿ ಮಾಧ್ಯಮಗಳಲ್ಲಿ ಓದಿದ್ದೇವೆ. ಅಂತಹ ಕೆಲಸಕ್ಕೆ ಮುಂದಾಗಬೇಡಿ, ಜೊತೆಗೆ ಇರುವ ಹಳೆಯ ಅಂಗಡಿಗಳಿಗೆ ಕಡಿವಾಣ ಹಾಕಲು ಮುಂದಾಗಿ ಎಂದು ತರಳಬಾಳು ಜಗದ್ಗುರು ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿ ಅಬಕಾರಿ ಸಚಿವ ಆರ್.ಬಿ. ತಿಮ್ಮಾಪುರ ಅವರಿಗೆ ಸಲಹೆ ಮಾಡಿದ್ದಾರೆ.

ಮಠದ ಸದ್ಧರ್ಮ ನ್ಯಾಯಪೀಠದಲ್ಲಿ ತಮ್ಮ ಪುತ್ರ ಚಿತ್ರದುರ್ಗ ಲೋಕಸಭಾ ಟಿಕೇಟ್ ಆಕಾಂಕ್ಷಿ ವಿನಯ್ ತಿಮ್ಮಾಪುರ ಅವರೊಂದಿಗೆ ಶ್ರೀಗಳನ್ನು ಭೇಟಿ ಮಾಡಿದ ಸಂದರ್ಭದಲ್ಲಿ ಈ ಸಲಹೆ ನೀಡಿದರು. ಮದ್ಯದ ಅಂಗಡಿಗಳಿಗೆ ಪರವಾನಿಗೆ ನೀಡುವ ಪದ್ಧತಿಯೂ ಬದಲಾಗಬೇಕು. ಮದ್ಯ ಮಾರಾಟಗಾರರು ಗ್ರಾಪಂ, ಸ್ಥಳೀಯ ಸಂಸ್ಥೆಗಳ ಪರವಾನಿಗೆ ಪಡೆಯಬೇಕು. ವರ್ಷಕ್ಕೊಮ್ಮೆ ಅವು ನವೀಕರಣಗೊಳ್ಳಬೇಕು.ಆಅವಧಿಯಲ್ಲಿ ಅಲ್ಲಿಯ ಜನರು ತಮ್ಮೂರಿಗೆ ಮದ್ಯದ ಅಂಗಡಿ ಬೇಡವೆಂದರೆ, ಅಂತಹ ಲೈಸೆನ್ಸ್ ರದ್ದು ಮಾಡಬೇಕು ಎಂದು ತಿಳಿಸಿದರು. ಹಳ್ಳಿಹಳ್ಳಿಗಳಲ್ಲಿ ಮದ್ಯ ಮಾರಾಟವಾಗುತ್ತಿದೆ. ಇದರಿಂದ ಹಳ್ಳಿಗರ ಬದುಕು ಅಸಹನೀಯವಾಗಿದೆ. ಮಹಿಳೆಯರ ಮೇಲೆ ಇದು ತುಂಬಾ ದುಷ್ಪರಿಣಾಮ ಉಂಟು ಮಾಡುತ್ತಿದೆ. ಕುಟುಂಬ ನಿರ್ವಹಣೆ ಮಾಡುವಲ್ಲಿ ಮಹಿಳೆಯರು ಸಂಕಟದಲ್ಲಿದ್ದಾರೆ. ಆದ್ದರಿಂದ ಮದ್ಯದ ಅಂಗಡಿಗಳ ಮೇಲೆ ನಿಯಂತ್ರಣ ಇರಲಿ ಎಂದರು.

ಕೆಲವು ದಶಕಗಳ ಹಿಂದೆ ಮದ್ಯಪಾನ ನಿಷೇಧ ಆಂದೋಲವನ್ನು ಆರಂಭಿಸಿದ್ದೆವು.


ಪುಟ 2







## ಪ್ರಮುಖ ಸುದ್ದಿ

### ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಮಹಂತೇಶ ಬೀಳಗಿ ಭರವಸೆ

# ಕೃಷಿ ಮಾರ್ಗಗಳಿಗೆ ನಿತ್ಯ 5 ಗಂಟೆ ವಿದ್ಯುತ್

» **ಚಿತ್ರದುರ್ಗ**



ಜಿಲ್ಲೆಯ ಎಲ್ಲಾ ಕೃಷಿ ಮಾರ್ಗಗಳಿಗೆ ಪ್ರತಿದಿನ 5 ಗಂಟೆಗಳ ಕಾಲ ವಿದ್ಯುತ್ ಸರಬರಾಜು ಮಾಡುವುದಾಗಿ ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಮಹಂತೇಶ ಬೀಳಗಿ ರೈತರಿಗೆ ಭರವಸೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಪ್ರಸ್ತುತ ಕೃಷಿ ಮಾರ್ಗಗಳಿಗೆ ವಿದ್ಯುತ್ ಸರಬರಾಜು ನೀಡುವ ಸಮಯವನ್ನು ಹಾಗೂ ಇತರೆ ವಿಷಯಗಳನ್ನು ಚರ್ಚಿಸುವ ಸಂಬಂಧ ಬೆಸ್ಕಾಂ ಅಧಿಕಾರಿಗಳು ಹಾಗೂ ರೈತ ಮುಖಂಡರ ಸಭೆಯಲ್ಲಿ ಅವರು ಮಾತನಾಡಿದರು. ಸಂಜೆಯ ವೇಳೆಯಲ್ಲಿ ಕೃಷಿಯ ಮಾರ್ಗಗಳಲ್ಲಿ ಬರುವ ತೋಟದ ಮನೆಗಳಿಗೆ ಲೈಂಟಿಗ್ ವ್ಯವಸ್ಥೆಗಾಗಿ ಸಂಜೆ 6 ರಿಂದ ಬೆಳಿಗ್ಗೆ 6 ರವರೆಗೆ ಸಿಂಗಲ್ ಫೇಸ್ ವಿದ್ಯುತ್ ನೀಡುವುದಾಗಿ ತಿಳಿಸಿದರು. ಸಿಂಗಲ್ ಫೇಸ್ ಅವಧಿಯಲ್ಲಿ ಯಾವುದೇ ಕಾರಣಕ್ಕೂ ತೋಟದ ಮನೆಯ ದೀಪದ ಬಳಕೆಯನ್ನು ಹೊರತುಪಡಿಸಿ ಯಾವುದೇ ಪಂಪ್ ಸೆಟ್ ಗಳನ್ನು ಬಳಸಬಾರದು ಎಂದು ಸೂಚಿಸಿದರು. ವಿಫಲವಾದ ಪರಿವರ್ತಕಗಳನ್ನು ನಿಗಧಿತ ಅವಧಿಯಲ್ಲಿ ಬದಲಾಯಿಸಲು ಮತ್ತು 11 ಕೆವಿ ಮತ್ತು ಎಲ್.ಟಿ ಮಾರ್ಗಗಳಿಗೆ ಅಡಚಣೆಯಾಗುವ ಮರಗಿಡಗಳನ್ನು ತೆರವು ಮಾಡಲು ಅಧಿಕಾರಿಗಳಿಗೆ ತಾಕೀತು ಮಾಡಿದರು.ಎಲ್ಲಾ ರೈತ ಮುಖಂಡರಿಗೆ ಹಾಲಿ ವಿದ್ಯುತ್ ವ್ಯವಸ್ಥೆಯ ಬಗ್ಗೆ ಸಹಕರಿಸುವಂತೆ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ ಮನವಿ ಮಾಡಿದರು. ಸಭೆಯಲ್ಲಿ ಬೆಸ್ಕಾಂ ತಾಂತ್ರಿಕ ನಿರ್ದೇಶಕ ಹೆಚ್.ಜೆ.ರಮೇಶ್, ಚಿತ್ರದುರ್ಗ ವಲಯ ಮುಖ್ಯ ಇಂಜಿನಿಯರ್ ಗೋವಿಂದಪ್ಪ, ದಾವಣಗೆರೆ ಅಧೀಕ್ಷಕ ಇಂಜಿನಿಯರ್ ಬಿ.ಎಸ್. ಜಗದೀಶ್, ಕೆಪಿಟಿಸಿ ಎಲ್ ಮತ್ತು ಬೆಸ್ಕಾಂ ಅಧಿಕಾರಿಗಳು, ರೈತ ಮುಖಂಡರು ಇದ್ದರು.

# 2.4ಲಕ್ಷ ಮನೆ ಕಟ್ಟಿಸಿಕೊಡಲು ಸಿಎಂ ಒಪ್ಪಿಗೆ

» ಚಿತ್ರದುರ್ಗ

ಐದು ಗ್ಯಾರೆಂಟಿಗಳ ಜೊತೆ ರಾಜ್ಯದ ಮುಖ್ಯಮಂತ್ರಿ ಬಡವರಿಗೆ ಮನೆಗಳನ್ನು ಕಟ್ಟಿಸಿಕೊಡಲು ಒಪ್ಪಿದ್ದಾರೆಂದು ವಸತಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ವಕ್ಫ್ ಸಚಿವ ಬಿ.ಜಡ್ ಜಮೀರ್‌ಅಹಮದ್ ಖಾನ್ ತಿಳಿಸಿದರು.

ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ರಾಜ್ಯಾಧ್ಯಕ್ಷರಾಗಿ ನೂತನವಾಗಿ ಆಯ್ಕೆಯಾಗಿರುವ ಕೆ.ಅನ್ವರ್‌ಭಾಷಾರವರಿಗೆ ಜಿಲ್ಲಾ ವಕ್ಫ್ ಮಂಡಳಿಯಿಂದ ಚಳ್ಳಕೆರೆ ರಸ್ತೆಯಲ್ಲಿರುವ ಎಸ್.ಜಿ.ಕಲ್ಯಾಣ ಮಂಟಪದಲ್ಲಿ ಮಂಗಳವಾರ ಹಮ್ಮಿಕೊಳ್ಳಲಾಗಿದ್ದ ಅಭಿನಂದನಾ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ವಕ್ಫ್‌ಬೋರ್ಡ್‌ನಲ್ಲಿ ಒಳ್ಳೆ ಕೆಲಸ ಮಾಡಲಿ ಎನ್ನುವ ವಿಶ್ವಾಸವಿಟ್ಟು ಕೆ.ಅನ್ವರ್‌ಭಾಷಾರವರನ್ನು ವಕ್ಫ್ ಮಂಡಳಿ ರಾಜ್ಯಾಧ್ಯಕ್ಷರನ್ನಾಗಿ ನೇಮಕ ಮಾಡಿದ್ದೇವೆ. ಜವಾಬ್ದಾರಿ ಜಾಸ್ತಿಯಿದೆ. ನಿರೀಕ್ಷೆಗೆ ತಕ್ಕಂತೆ ಅಭಿವೃದ್ದಿ ಕೆಲಸಗಳನ್ನು ಕೈಗೊಳ್ಳಲಿ ಎಂದು ಶುಭ ಹಾರೈಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ನಾಲ್ಕುವರೆ ತಿಂಗಳುಗಳಾಗಿದೆ. 2013 ರಲ್ಲಿ ಸಿದ್ದರಾಮಯ್ಯನವರು ರಾಜ್ಯದ ಮುಖ್ಯಮಂತ್ರಿಯಾಗಿದ್ದ ಮಂಜೂರು ಮಾಡಲಾಗಿದ್ದ ಹಳೆ ಮನೆಗಳನ್ನು ಪೂರ್ಣಗೊಳಿಸುವುದಕ್ಕಾಗಿ ಈ ಬಾರಿ 2400 ಕೋಟಿ ರೂ.ಗಳನ್ನು ಬಿಡುಗಡೆಗೊಳಿಸಿದ್ದಾರೆ. 2018 ರಿಂದ 23 ರವರೆಗೆ ಅಧಿಕಾರದಲಿದ್ದ ಬಿಜೆಪಿ. ಸರ್ಕಾರ ಒಂದೆ ಒಂದು ಹೊಸ ಮನೆಗಳನ್ನು ಬಡವರಿಗೆ ಮಂಜೂರು ಮಾಡಿಲ್ಲ. ಒಂದು ಮನೆ ಕಟ್ಟಿಕೊಳ್ಳಲು 7.50 ಲಕ್ಷ ರೂ.ಗಳು ಬೇಕು. ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಮೂರು ಲಕ್ಷ ರೂ.ಗಳ ಸಬ್ಸಿಡಿ ದೊರಕುತ್ತದೆ. ಉಳಿದ ನಾಲ್ಕುವರೆ ಲಕ್ಷ ರೂ.ಗಳನ್ನು ಬಡ ಫಲಾನುಭವಿಗಳು ಹೊಂದಿಸುವುದು ಕಷ್ಟ ಎಂದು ತಿಳಿದು ಮುಖ್ಯಮಂತ್ರಿ ಸಿದ್ದರಾಮಯ್ಯನವರ ಜೊತೆ ಮಾತನಾಡಿದ್ದೇನೆ. ಸ್ಲಂ



ಬೋರ್ಡ್‌ನಿಂದ 1.80 ಲಕ್ಷ ಮನೆಗಳನ್ನು ನಿರ್ಮಿಸಲಾಗುವುದು. ರಾಜೀವ್‌ಗಾಂಧಿ ವಸತಿ ಯೋಜನೆಯಡಿ 53 ಸಾವಿರ ಮನೆಗಳನ್ನು ನಿರ್ಮಿಸಲಾಗುವುದು ಎಂದು ಹೇಳಿದರು.

ಒಂದು ಲಕ್ಷ ಎಂಬತ್ತು ಸಾವಿರದ ಇನ್ನೂರು ಮನೆಗಳನ್ನು ನಿರ್ಮಿಸಲು 5400 ಕೋಟಿ ರೂ.ಗಳು ಬೇಕು. ವಸತಿಯಿಲ್ಲದೆ ಬೀದಿಯಲ್ಲಿರುವ 2 ಲಕ್ಷ 40 ಸಾವಿರ ಬಡವರಿಗೆ ಮನೆಗಳನ್ನು ಕಟ್ಟಿಸಿಕೊಡಲು ಮುಖ್ಯಮಂತ್ರಿ ಸಮ್ಮತಿಸಿದ್ದಾರೆ. ಬಡವರು, ದಲಿತರು, ಅಲ್ಪಸಂಖ್ಯಾತರ ಪರವಾಗಿರುವ ಸಿದ್ದರಾಮಯ್ಯನವರು 3150 ಕೋಟಿ ರೂ.ಗಳನ್ನು ಅಲ್ಪಸಂಖ್ಯಾತರಿಗಾಗಿ ಮೀಸಲಿಟ್ಟಿದ್ದರು. ಹೆಚ್.ಡಿ.ಕುಮಾರಸ್ವಾಮಿ ರಾಜ್ಯದ ಮುಖ್ಯಮಂತ್ರಿಯಾಗಿದ್ದಾಗ 1500 ಕೋಟಿ ರೂ.ಗಳನ್ನು ಕಡಿಮೆಗೊಳಿಸಿ ಎರಡು ಸಾವಿರ ಕೋಟಿಗೆ ತಂದು ನಿಲ್ಲಿಸಿದ್ದನ್ನು ಕಳೆದ ಅವಧಿಯಲ್ಲಿ ಅಧಿಕಾರದಲ್ಲಿದ್ದ ಬಿಜೆಪಿ.ಯವರು ಎಂಟು ನೂರು ಕೋಟಿಗೆ ತಂದರು. ಅಲ್ಪಸಂಖ್ಯಾತರ ಮಕ್ಕಳಿಗಾಗಿ ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿದ್ದ ಎಲ್ಲಾ ಯೋಜನೆಗಳನ್ನು ಬಿಜೆಪಿ.ಸರ್ಕಾರ ರದ್ದುಪಡಿಸಿತು. ಅಲ್ಪಸಂಖ್ಯಾತ ಮಕ್ಕಳಿಗೆ ನೀಡುತ್ತಿದ್ದ ವಿದ್ಯಾರ್ಥಿ ವೇತನದಿಂದಾಗಿ ಐದು ಲಕ್ಷ ಮಕ್ಕಳು ಪ್ರಯೋಜನ ಪಡೆಯುತ್ತಿದ್ದರು ಬಿಜೆಪಿ.ಸರ್ಕಾರ ಅಧಿಕಾರದಲ್ಲಿದ್ದಾಗ ಎಲ್ಲದಕ್ಕೂ ಕತ್ತರಿ ಹಾಕಿತು ಎಂದು ಅಸಮಾಧಾನ ವ್ಯಕ್ತಪಡಿಸಿದರು.

ವೈದ್ಯಕೀಯ ಶಿಕ್ಷಣ ಪಡೆಯುತ್ತಿರುವ 1300 ಅಲ್ಪಸಂಖ್ಯಾತ ಮಕ್ಕಳಿಗೆ ಸಿದ್ದರಾಮಯ್ಯನವರು 2013 ರಲ್ಲಿ ಮುಖ್ಯಮಂತ್ರಿಯಾದಾಗ ಮೂರು ಲಕ್ಷ ರೂ. ಕೊಡುತ್ತಿದ್ದರು. ಈಗ ಹನ್ನೊಂದುವರೆ ಲಕ್ಷ ಶುಲ್ಕವಾಗಿರುವುದರಿಂದ ಐದುವರೆ ಲಕ್ಷ ರೂ.ಗಳನ್ನು ನೀಡಲು ತೀರ್ಮಾನಿಸಿದ್ದಾರೆ. ರಾಜ್ಯದ ಜನ ಇಟ್ಟಿರುವ ನಿರೀಕ್ಷೆಗೆ ತಕ್ಕಂತೆ ನಮ್ಮ ಸರ್ಕಾರ ಕೆಲಸ ಮಾಡುತ್ತಿದೆ ಎಂದು ತಿಳಿಸಿದರು.

ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಮಾತನಾಡಿ ಸರ್ಕಾರ ಅಧಿಕಾರಕ್ಕೆ ಬಂದು ಐದು ತಿಂಗಳಾಗಿದ್ದು, ಚುನಾವಣೆ ಪೂರ್ವದಲ್ಲಿ ಘೋಷಿಸಿದಂತೆ ಐದು ಗ್ಯಾರೆಂಟಿಗಳನ್ನು ಈಡೇರಿಸಿದೆ. ಜಿಲ್ಲೆಯ ಆರು ಕ್ಷೇತ್ರಗಳ ಪೈಕಿ ಐದು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆದ್ದಿದೆ. ಕರ್ನಾಟಕ ರಾಜ್ಯ ವಕ್ಫ್ ಮಂಡಳಿಗೆ ನೂತನ ಅಧ್ಯಕ್ಷರಾಗಿರುವ ಕೆ.ಅನ್ವರ್‌ಭಾಷಾ ಜಿಲ್ಲೆಯ ಎಲ್ಲಾ ಮಸೀದಿ ಹಾಗೂ ದರ್ಗಾಗಳಿಗೆ ಪ್ರಾಶಸ್ತ್ಯ ನೀಡಲಿ ಎಂದು ಶುಭ ಹಾರೈಸಿದರು.

ಮಾಜಿ ಸಚಿವ ಹೆಚ್.ಆಂಜನೇಯ ಮಾತನಾಡುತ್ತ ಕೆ.ಅನ್ವರ್‌ಭಾಷಾ ಗ್ರಾಮೀಣ ಭಾಗದಿಂದ ಬಂದವರು. ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ರಾಜ್ಯಾಧ್ಯಕ್ಷರಾಗಿ ಆಯ್ಕೆಯಾಗುವ ಮೂಲಕ ಜಿಲ್ಲೆಗೆ ಕೀರ್ತಿ ತಂದಿದ್ದಾರೆ. ಸಮಗ್ರ ಅಭಿವೃದ್ದಿಗೆ ಶ್ರಮಿಸಲಿ ಎಂದು ಹೇಳಿದರು.

ವಸತಿ ಸಚಿವ ಬಿ.ಜಡ್. ಜಮೀರ್ ಅಹಮದ್‌ಖಾನ್ ಬಡವರು, ದಲಿತರ ಪರವಾಗಿರುವವರು, ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರ ಸಿದ್ದಾಂತ ಒಪ್ಪಿರುವ ರಾಜಕಾರಣಿ. ಸಾಮಾಜಿಕ ನ್ಯಾಯ ಎತ್ತಿಹಿಡಿಯುವ ಸಚಿವ ಜಮೀರ್ ಅಹಮದ್ ಖಾನ್‌ಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಅಧಿಕಾರ ಕೊಟ್ಟಿದ್ದಾರೆ. ಮುಸಲ್ಮಾನರಿಗಿದ್ದ ಶೇ.ನಾಲ್ಕು ಮೀಸಲಾತಿಯನ್ನು ರಾಜ್ಯ ಬಿಜೆಪಿ.ಸರ್ಕಾರ ರದ್ದುಪಡಿಸಿದೆ. ಹಿಂದೂ-ಮುಸ್ಲಿಂರು ಸೇರಿ ಬ್ರಿಟೀಷರ ವಿರುದ್ದ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ್ದಾರೆನ್ನುವುದನ್ನು ಕೋಮುವಾದಿ ಬಿಜೆಪಿ.ಯವರು ಅರ್ಥಮಾಡಿಕೊಳ್ಳಬೇಕು ಎಂದು ವಿರೋಧಿಗಳಿಗೆ ತಿರುಗೇಟು ನೀಡಿದರು.

ಬರಪೀಡಿತ ಚಿತ್ರದುರ್ಗ ಜಿಲ್ಲೆಯಲ್ಲಿ ವಸತಿ ಹೀನರು ಸಾಕಷ್ಟು ಜನರಿದ್ದಾರೆ. ಎಲ್ಲರಿಗೂ ಮನೆಗಳನ್ನು ಕಟ್ಟಿಸಿಕೊಡುವಂತೆ ಸಚಿವ ಜಮೀರ್ ಅಹಮದ್‌ಖಾನ್‌ರವರಲ್ಲಿ ಹೆಚ್.ಆಂಜನೇಯ ಮನವಿ ಮಾಡಿದರು.

ಮಾಜಿ ಶಾಸಕ ಎನ್.ವೈ.ಗೋಪಾಲಕೃಷ್ಣ ಮಾತನಾಡಿ ಕೆ.ಅನ್ವರ್‌ಭಾಷ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಗೆ ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿರುವುದು ದೊಡ್ಡ ಸಾಧನೆ. ಅಲ್ಪಸಂಖ್ಯಾತರು ಶಕ್ತಿ ನೀಡಿದ್ದರಿಂದ ಈ ಬಾರಿಯ ವಿಧಾನಸಭೆ ಚುನಾವಣೆಯಲ್ಲಿ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಸ್ಪಷ್ಟ ಬಹುಮತದೊಂದಿಗೆ ಅಧಿಕಾರ ಹಿಡಿಯಲು ಸಾಧ್ಯವಾಯಿತು. ಪಕ್ಷ ತೊರೆದು ಬಿಜೆಪಿ.ಗೆ ಹೋಗಿದ್ದ ನಾನು ಮತ್ತೆ ಕಾಂಗ್ರೆಸ್‌ಗೆ ಬರಲು ಜಮೀರ್ ಅಹಮದ್‌ಖಾನ್ ಹಾಗೂ ವಿಧಾನಪರಿಷತ್ ಸದಸ್ಯ ಅಬ್ದುಲ್ ಜಬ್ಬಾರ್ ಇವರುಗಳೆ ಕಾರಣ ಎನ್ನುವುದನ್ನು ಸ್ಮರಿಸಿಕೊಂಡರು.

ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ ಮಾತನಾಡುತ್ತ ಎಲ್ಲಾ ಸಮುದಾಯದವರ ಪ್ರೀತಿ ವಿಶ್ವಾಸ ಗಳಿಸಿರುವ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ.ಅನ್ವರ್‌ಭಾಷಾ ಜಿಲ್ಲೆಯಲ್ಲಿರುವ ಸಾಕಷ್ಟು ಸಮಸ್ಯೆಗಳ ಕಡೆ ಗಮನ ಹರಿಸಿ ಅಲ್ಪಸಂಖ್ಯಾತರಿಗೆ ಹೆಚ್ಚು ಸೌಲಭ್ಯಗಳನ್ನು ಸರ್ಕಾರದಿಂದ ದೊರಕಿಸಬೇಕು ಎಂದು ಹೇಳಿದರು.

ಅಭಿನಂದನೆ ಸ್ವೀಕರಿಸಿ ಮಾತನಾಡಿದ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ.ಅನ್ವರ್‌ಭಾಷಾ ರಾಜ್ಯದಲ್ಲಿಯೇ ಚಿತ್ರದುರ್ಗ ಜಿಲ್ಲೆ ಅತ್ಯಂತ ಹಿಂದುಳಿದ ಪ್ರದೇಶವಾಗಿರುವುದರಿಂದ ಈ ಭಾಗಕ್ಕೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಕೆಲಸಗಳಾಗಬೇಕು. ಅನೇಕ ವರ್ಷಗಳಿಂದಲೂ ಬೆಂಗಳೂರಿನವರೆ ವಕ್ಫ್ ಮಂಡಳಿ ರಾಜ್ಯಾಧ್ಯಕ್ಷರಾಗುತ್ತಿದ್ದರು. ಬಹಳ ವರ್ಷಗಳ ನಂತರ ಚಿತ್ರದುರ್ಗ ಜಿಲ್ಲೆಯವನಾದ ನನಗೆ ಅಧಿಕಾರ ಸಿಕ್ಕಿರುವುದಕ್ಕೆ ಸಚಿವ ಜಮೀರ್ ಅಹಮದ್‌ಖಾನ್ ಸೇರಿದಂತೆ ಅನೇಕರ ಶ್ರಮವಿದೆ. ನನ್ನನ್ನು ಅವಿರೋಧವಾಗಿ ಆಯ್ಕೆ ಮಾಡಿರುವುದರಿಂದ ವಕ್ಫ್ ಮಂಡಳಿ ಅಭಿವೃದ್ದಿಗೆ ಪ್ರಾಮಾಣಿಕವಾಗಿ ಶ್ರಮಿಸುತ್ತೇನೆಂದು ಭರವಸೆ ನೀಡಿದರು.

ಮಾಜಿ ಸಂಸದ ಬಿ.ಎನ್.ಚಂದ್ರಪ್ಪ, ವಿಧಾನಪರಿಷತ್ ಸದಸ್ಯ ಅಬ್ದುಲ್ ಜಬ್ಬಾರ್ ಇವರುಗಳು ಮಾತನಾಡಿದರು.

ಶಾಸಕ ಕೆ.ಸಿ.ವೀರೇಂದ್ರಪಪ್ಪಿ ಅಧ್ಯಕ್ಷತೆ ವಹಿಸಿದ್ದರು. ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಜೆ.ಜೆ.ಹಟ್ಟಿಯ ಯುವ ಮುಖಂಡ ಡಾ.ಬಿ.ತಿಪ್ಪೇಸ್ವಾಮಿ, ಕೆ.ಪಿ.ಸಿ.ಸಿ. ಸದಸ್ಯ ವಿಜಯಕುಮಾರ್ ವೇದಿಕೆಯಲ್ಲಿದ್ದರು.

ಜಿಲ್ಲಾ ವಕ್ಫ್ ಮಂಡಳಿ ಅಧ್ಯಕ್ಷ ಇಕ್ಬಾಲ್ ಹುಸೇನ್(ಎಂ.ಸಿ.ಓ.ಬಾಬು) ಪ್ರಾಸ್ತಾವಿಕವಾಗಿ ಮಾತನಾಡಿದರು.

## ದಾರ್ಶನಿಕರ ಜಯಂತಿಯನ್ನು ಸರ್ವರು ಆಚರಿಸುವಂತಾಗಬೇಕು: ತಹಶೀಲ್ದಾರ್

» ಹೊಸದುರ್ಗ

ಜಗತ್ತಿಗೆ ರಾಮಾಯಣದ ಮೂಲಕ ಜ್ಞಾನದ ಸಂದೇಶವನ್ನು ಕೊಟ್ಟಂತಹ ಆದಿಕವಿ ಮಹರ್ಷಿ ವಾಲ್ಮೀಕಿಯಂತಹ ಮಹಾತ್ಮರನ್ನು ಒಂದು ಜಾತಿ ಮತ್ತು ವರ್ಗಕ್ಕೆ ಸೀಮಿತ ಮಾಡದೇ, ಮನುಕುಲದಲ್ಲಿ ಹುಟ್ಟಿದ ಎಲ್ಲರೂ ವಾಲ್ಮೀಕಿ ಜಯಂತಿಯನ್ನು ಆಚರಿಸುವಂತೆ ಆಗಬೇಕೆಂದು ತಹಶೀಲ್ದಾರ್ ತಿರುಪತಿ ಪಾಟೀಲ್ ತಿಳಿಸಿದರು.

ಪಟ್ಟಣದ ತಾಲೂಕು ಕಚೇರಿ ಸಭಾಂಗಣದಲ್ಲಿ ಮಂಗಳವಾರ ವಾಲ್ಮೀಕಿ ಜಯಂತಿಯ ಅಂಗವಾಗಿ ಕರೆದಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜ್ಞಾನಕ್ಕೆ ಹೆಸರಾದ ಮಹರ್ಷಿ ವಾಲ್ಮೀಕಿ ಅವರು ರಾಮಾಯಣದ ಮೂಲಕ ಜಗತ್ತಿನಲ್ಲಿ ಕುಟುಂಬ ವ್ಯವಸ್ಥೆಗೆ ಭದ್ರ ಬುನಾದಿ ಹಾಕಿದ್ದಾರೆ. ಇದೇ ಅ.28 ರಂದು ಹೊಸದುರ್ಗ ಪಟ್ಟಣದ ಅಶೋಕ ರಂಗಮಂದಿರದಲ್ಲಿ ನಡೆಯುವ ವಾಲ್ಮೀಕಿ ಜಯಂತಿ ಕಾರ್ಯಕ್ರಮಕ್ಕೆ ಸರ್ವರು ಆಗಮಿಸಿ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು. ವಾಲ್ಮೀಕಿ ಜಯಂತಿಯನ್ನು ತಾಲೂಕಿನ ಎಲ್ಲಾ ಶಾಲಾ-ಕಾಲೇಜುಗಳಲ್ಲಿ ಕಡ್ಡಾಯವಾಗಿ ಆಚರಿಸಬೇಕು. ಸರ್ಕಾರದ ಎಲ್ಲಾ ಇಲಾಖೆಗಳು ಜಯಂತಿ ಆಚರಿಸಿ, ತಾಲ್ಲೂಕು ಆಡಳಿತದಿಂದ ನಡೆಸುವ ವಾಲ್ಮೀಕಿ ಜಯಂತಿ ಕಾರ್ಯಕ್ರಮಕ್ಕೆ ಆಗಮಿಸಬೇಕು. ಪೂರ್ವಭಾವಿ



ಸಭೆಗೆ ಬರದ ಇಲಾಖಾ ಮುಖ್ಯಸ್ಥರಿಗೆ ನೋಟಿಸ್ ನೀಡಲಾಗುವುದು.

ಒಟ್ಟಾರೆ ಈ ವಾಲ್ಮೀಕಿ ಜಯಂತಿಯಿಂದ ಜಗತ್ತಿಗೆ ರಾಮಾಯಣದ ಮೂಲಕ ಶಾಂತಿ ಸಂದೇಶವನ್ನು ಸಾರಿದ ಮಹಾನ್ ದಾರ್ಶನಿಕರ ಬದುಕು ನಮಗೆ ಆದರ್ಶವಾಗಬೇಕು ಎಂದು ಹೇಳಿದರು.

ಈ ವೇಳೆ ಸಭೆಯಲ್ಲಿ ಬಿಇಓ ಸೈಯದ್ ಮೋಸಿನ್, ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು, ಕ್ಷೇತ್ರ ಸಂಪನ್ಮೂಲ ಸಮನ್ವಯ ಶಿಕ್ಷಣಾಧಿಕಾರಿ ಶ್ರೀನಿವಾಸ್, ವಾಲ್ಮೀಕಿ ನಾಯಕ ನೌಕರರ ಸಂಘದ ಅಧ್ಯಕ್ಷ ಜಯಪ್ರಕಾಶ್, ಕಾರ್ಯದರ್ಶಿ ಮೈಲಾರಪ್ಪ, ತಾಲ್ಲೂಕು ವಾಲ್ಮೀಕಿ ನಾಯಕ ಸಮಾಜದ ಅಧ್ಯಕ್ಷ ಕೆ.ಟಿ.ರಂಗನಾಥ್, ಕಾರ್ಯದರ್ಶಿ ವೆಂಗಳಾಪುರ ರಂಗನಾಥ್, ರಾಜ್ಯ ವಾಲ್ಮೀಕಿ ನಾಯಕ ಮಹಾಸಭಾ ಯುವ ಘಟಕದ ಉಪಾಧ್ಯಕ್ಷ ತುಂಬಿನಕೆರೆ ಬಸವರಾಜ್, ಉಪಾಧ್ಯಕ್ಷ ಗೌಡ್ರ ತಿಪ್ಪೇಸ್ವಾಮಿ, ಖಜಾಂಚಿ ಜಯಣ್ಣ, ಮುಖಂಡರಾದ ಮಹೇಶ್ ಮತ್ತು ಕೆಂಚಪ್ಪ ನಾಯಕ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಗೂ ನಾಯಕ ಸಮಾಜ ಮುಖಂಡರಿದ್ದರು.

## ರಾಷ್ಟ್ರೀಯ ಸೇವಾ ಯೋಜನೆಯ ರಾಜ್ಯಮಟ್ಟದ ಪ್ರಶಸ್ತಿ ವಿಜೇತರಿಗೆ ಸನ್ಮಾನ: ಗ್ರಾಪಂ ಅಧ್ಯಕ್ಷ ವೆಂಕಟೇಶ್.



» ಚಳ್ಳಕೆರೆ

ಗ್ರಾಮೀಣ ಭಾಗಗಳಲ್ಲಿ ರಾಷ್ಟ್ರೀಯ ಸೇವಾ ಯೋಜನಾ ಚಟುವಟಿಕೆಗಳನ್ನು ಕ್ರಿಯಾಶೀಲವಾಗಿ ಹಮ್ಮಿಕೊಳ್ಳುವ ಮೂಲಕ ಗ್ರಾಮೀಣ ಭಾಗದ ಜನರಲ್ಲಿ ನಿರಂತರ ಜಾಗೃತಿ ಮೂಡಿಸುವ ಕಾರ್ಯವನ್ನು ಚಳ್ಳಕೆರೆ ಸರ್ಕಾರಿ ಪದವಿ ಪೂರ್ವ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನಾ ಅಧಿಕಾರಿಗಳು, ಶಿಬಿರಾರ್ಥಿಗಳು ಉತ್ತಮವಾಗಿ ಮಾಡಿದ್ದು, ಇವರ ಕಾರ್ಯಕ್ಕೆ ಗ್ರಾಮದಲ್ಲಿ ಮೆಚ್ಚುಗೆ ವ್ಯಕ್ತವಾಗಿದೆ ಎಂದು ದೊಡ್ಡೇರಿ ಗ್ರಾಮ ಪಂಚಾಯಿತಿ ಅಧ್ಯಕ್ಷ ವೆಂಕಟೇಶ್ ತಿಳಿಸಿದರು.

ಅವರು, ಗ್ರಾಮದ ಪಂಚಾಯಿತಿ ಕಚೇರಿ ಆವರಣದಲ್ಲಿ ರಾಷ್ಟ್ರೀಯ ಸೇವಾ ಯೋಜನೆಯಲ್ಲಿ ರಾಜ್ಯ ಪ್ರಶಸ್ತಿ ಪಡೆದ ಬಿ.ಶಾಂತಕುಮಾರಿ, ಪ್ರಾಂಶುಪಾಲ ಎಂ.ರವೀಶ್‌ರವರನ್ನು ಪಂಚಾಯಿತಿ ವತಿಯಿಂದ ಸನ್ಮಾನಿಸಿ, ಅಭಿನಂದಿಸಿ ಮಾತನಾಡಿದರು. ನಮ್ಮ ಗ್ರಾಮದಲ್ಲಿ ಸ್ವಚ್ಚತೆ ಎಂಬುವುದು ಪರಿಪೂರ್ಣವಾಗಿರಲಿಲ್ಲ. ಆದರೆ, ಕಾಲೇಜಿನ ವಿದ್ಯಾರ್ಥಿಗಳು ಒಂದುವಾರಗಳ ಕಾಲ ಇಡೀ ಗ್ರಾಮದ ಮುಖ್ಯ ಹಾಗೂ ಸಂಪರ್ಕ ರಸ್ತೆಗಳನ್ನು ಸ್ವಚ್ಚಗೊಳಿಸಿದ್ದಲ್ಲದೆ, ಊರಿನಲ್ಲಿದ್ದ ಬಹುತೇಕ ಕಸವನ್ನು ತೆಗೆದುಹಾಕಿ ಇಡೀ ಗ್ರಾಮವೇ ಸ್ವಚ್ಚತೆಯಿಂದ ಕಾಣುವಂತೆ ಮಾಡಿದ್ದಾರೆ.

ಪ್ರಮುಖ ಸುದ್ದಿ

# ಗೋವಾದಿಂದ ಅಕ್ರಮ ಮದ್ಯ ಸಾಗಾಣಿಕೆ ತಡೆಗಟ್ಟಿ: ಸಚಿವ

ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು, ಗಾಂಜಾ, ಅಫೀಮು ಎಂಬುದು ಮಾರಕವಾಗಿರುವ ಮಾದಕ ವಸ್ತುಗಳಾಗಿದ್ದು, ಗಾಂಜಾ ಬೆಳೆಯುವುದನ್ನು ಸಂಪೂರ್ಣ ಮಟ್ಟಹಾಕಬೇಕು, ಒಂದು ವೇಳೆ ಯಾರಾದರೂ ಗಾಂಜಾ ಬೆಳೆಯುವುದು ಕಂಡುಬಂದಲ್ಲಿ, ನಿರ್ದಾಕ್ಷಿಣ್ಯವಾಗಿ, ಯಾವುದೇ ಪ್ರಭಾವಕ್ಕೆ ಒಳಗಾಗದೆ ಕಠಿಣ ಕ್ರಮ ಕೈಗೊಳ್ಳಬೇಕು. ಕಳ್ಳಭಟ್ಟಿಯ ಅಪಾಯದ ಬಗ್ಗೆ ಜನಪ್ರತಿನಿಧಿಗಳು, ಪೊಲೀಸ್ ಇಲಾಖೆ ಹಾಗೂ ಆರೋಗ್ಯ ಇಲಾಖೆಯ ಸಹಯೋಗದಲ್ಲಿ ಜನಜಾಗೃತಿ ಮೂಡಿಸುವ ಕಾರ್ಯ ಆಗಬೇಕು ಎಂದ ಸಚಿವರು, ಮಾದಕ ವಸ್ತುಗಳ ಪ್ರಕರಣದಲ್ಲಿ ಅತಿ ಹೆಚ್ಚು ಪ್ರಮಾಣದ ಮಾದಕ ವಸ್ತುಗಳನ್ನು ವಶಕ್ಕೆ ಪಡೆಯುವಂತಹ ಹಾಗೂ ದಕ್ಷತೆ ತೋರುವ ಉತ್ತಮ ಅಬಕಾರಿ ಅಧಿಕಾರಿಗಳನ್ನು ಗುರುತಿಸಿ, ಅಂತಹವರಿಗೆ ನೀಡುವ ಪ್ರೋತ್ಸಾಹ ಬಹುಮಾನ ಮೊತ್ತವನ್ನು ಹೆಚ್ಚಿಸುವುದಲ್ಲದೆ, ವಾರ್ಷಿಕವಾಗಿ ಅತ್ಯುತ್ತಮ ಅಬಕಾರಿ ಅಧಿಕಾರಿಯ ಪ್ರಶಸ್ತಿ ನೀಡುವ ಯೋಜನೆ



ಜಾರಿಗೆ ತರಲಾಗುವುದು ಎಂದು ಸಚಿವರು ಭರವಸೆ ನೀಡಿದರು.

**ಅಬಕಾರಿ ಅಕಾಡೆಮಿಯ ಭರವಸೆ :** ಅಬಕಾರಿ ಇಲಾಖೆ ಅಧಿಕಾರಿ, ಸಿಬ್ಬಂದಿಗಳು ಕೂಡ ಕಡ್ಡಾಯವಾಗಿ ಪರೇಡ್ ಕವಾಯತು ನಡೆಸಬೇಕು, ದೈಹಿಕ ಶ್ರಮ ಹಾಕಬೇಕು, ದೈಹಿಕ ಸಾಮರ್ಥ್ಯ ಇಲ್ಲದಿದ್ದಲ್ಲಿ ಕರ್ತವ್ಯದಲ್ಲಿ ಚುರುಕುತನ ಬರುವುದಿಲ್ಲ, ಪ್ರಕರಣಗಳನ್ನು ಹೊಸ ಹೊಸ ಆಯಾಮದಲ್ಲಿ ತನಿಖೆ ನಡೆಸುವ ರೀತಿಯಲ್ಲಿ, ಸುಧಾರಿತ ಕ್ರಮಗಳ ಬಗ್ಗೆ ಆಗಾಗ್ಗೆ ತರಬೇತಿಗಳು ನಡೆಯಬೇಕು ಎಂದು ಸಚಿವರು ಹೇಳಿದರು. ಬಳ್ಳಾರಿ ಜಿಲ್ಲೆ ಅಬಕಾರಿ ಉಪ ಆಯುಕ್ತರು ಮಾತನಾಡಿ, ಅಬಕಾರಿ ಇಲಾಖೆ ಅಧಿಕಾರಿ, ಸಿಬ್ಬಂದಿಗಳಿಗೆ ನೇಮಕಾತಿಯ ಆರಂಭದಲ್ಲಿ ನೀಡುವ ಪೊಲೀಸ್ ಬುನಾದಿ ತರಬೇತಿಯ ಬಳಿಕ, ಯಾವುದೇ ತರಬೇತಿಯನ್ನು ನೀಡಲಾಗುತ್ತಿಲ್ಲ. ಪೊಲೀಸ್ ಇಲಾಖೆಯ ಮಾದರಿಯಲ್ಲಿ ಅಧಿಕಾರಿ, ಸಿಬ್ಬಂದಿಗೆ ಆಗಾಗ್ಗೆ ತರಬೇತಿಗಳನ್ನು ಆಯೋಜಿಸಬೇಕು, ಇದಕ್ಕಾಗಿ ಅಬಕಾರಿ ಅಕಾಡೆಮಿ ಸ್ಥಾಪಿಸುವ ಅಗತ್ಯವಿದೆ ಎಂದರು, ಇದಕ್ಕೆ ಇತರೆ ಜಿಲ್ಲೆಗಳ ಅಬಕಾರಿ ಇಲಾಖೆ ಅಧಿಕಾರಿ, ಸಿಬ್ಬಂದಿಗಳು ಕೂಡ ದನಿಗೂಡಿಸಿದರು. ಪ್ರತಿಕ್ರಿಯಿಸಿದ ಸಚಿವರು, ಅಬಕಾರಿ ಅಕಾಡೆಮಿ ಸ್ಥಾಪಿಸುವ ಬಗ್ಗೆ ಪರಿಶೀಲಿಸಿ, ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

**9619 ಅಬಕಾರಿ ದಾಳಿ :** ಹೊಸಪೇಟೆ ಅಬಕಾರಿ ವಿಭಾಗ ವ್ಯಾಪ್ತಿಯ ಜಿಲ್ಲೆಗಳಲ್ಲಿ ಈ ವರ್ಷ ಅಕ್ರಮ ಮದ್ಯ ಮಾರಾಟ ಹಾಗೂ ಸಾಗಾಣಿಕೆಗೆ ಸಂಬಂಧಿಸಿದಂತೆ ಒಟ್ಟು 9619 ದಾಳಿ ನಡೆಸಲಾಗಿದ್ದು, ಈ ಪೈಕಿ 631 ಘೋರ ಪ್ರಕರಣಗಳು, ಕಲಂ 15 ಎ ಅಡಿ 6352, ಬಿಎಲ್‌ಸಿ ನಡಿ 962, ಎನ್‌ಡಿಪಿಎಸ್ ನಡಿ 29 ಪ್ರಕರಣಗಳು ದಾಖಲಾಗಿವೆ. ಇದರಲ್ಲಿ 10491 ಆರೋಪಿಗಳನ್ನು ಬಂಧಿಸಿದ್ದು, 432 ವಾಹನಗಳನ್ನು ಜಪ್ತಿ ಮಾಡಲಾಗಿದೆ. ಒಟ್ಟು 84001 ಲೀ. ಮದ್ಯ, 1.20 ಲಕ್ಷ ಲೀ. ಬಿಯರ್, 137 ಲೀ. ಸೇಂದಿ, 7.65 ಲೀ. ವೈನ್, 46.8 ಲೀ. ಕಳ್ಳಭಟ್ಟಿ, 170 ಲೀ. ಬೆಲ್ಲದ ಕೊಳೆ ಹಾಗೂ 615.6 ಲೀ. ಹೊರ ರಾಜ್ಯದ ಮದ್ಯವನ್ನು ವಶಕ್ಕೆ ಪಡೆಯಲಾಗಿದೆ ಎಂದು ಹೊಸಪೇಟೆ ಅಬಕಾರಿ ವಿಭಾಗದ ಜಂಟಿ ಆಯುಕ್ತ ಬಾಲಕೃಷ್ಣ ಅವರು ಸಭೆಗೆ ವಿವರ ನೀಡಿದರು. ಸಭೆಯಲ್ಲಿ ಹೊಸಪೇಟೆ ಅಬಕಾರಿ ವಿಭಾಗದ ಜಂಟಿ ಆಯುಕ್ತ ಬಾಲಕೃಷ್ಣ, ಚಿತ್ರದುರ್ಗ ಜಿಲ್ಲೆ ಅಬಕಾರಿ ಉಪ ಆಯುಕ್ತ ಮಾದೇಶ್, ಅಬಕಾರಿ ಸಚಿವರ ಆಪ್ತ ಕಾರ್ಯದರ್ಶಿ ವಿನಾಯಕ ಪಾಲನಕರ್ ಸೇರಿದಂತೆ ಹೊಸಪೇಟೆ ಅಬಕಾರಿ ವಿಭಾಗ ವ್ಯಾಪ್ತಿಯ ಚಿತ್ರದುರ್ಗ, ದಾವಣಗೆರೆ, ವಿಜಯನಗರ, ಗದಗ, ಕೊಪ್ಪಳ ಮತ್ತು ಬಳ್ಳಾರಿ ಜಿಲ್ಲೆಗಳ ಅಬಕಾರಿ ಇಲಾಖೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಹೊಸ ಮದ್ಯದ ಅಂಗಡಿಗಳು ಬೇಡ

» ಮೊದಲ ಪುಟದಿಂದ

ಆ ಚಳುವಳಿಗೆ ರಾಜ್ಯದ ಎಲ್ಲಾ ಭಾಗಗಳಲ್ಲಿ ಉತ್ತಮ ಸ್ಪಂದನೆ ದೊರೆತಿತ್ತು. ಬಹುದೊಡ್ಡ ಸಂಖ್ಯೆಯಲ್ಲಿ ಮಹಿಳೆಯರು ಚಳುವಳಿಯನ್ನು ಬೆಂಬಲಿಸಿದ್ದರು ಎಂದು ಶ್ರೀಗಳು ಸಚಿವರಿಗೆ ನೆನಪು ಮಾಡಿದರು.

**ಹೊಸ ಅಂಗಡಿಗಳಿಲ್ಲ: ತಿಮ್ಮಾಪುರ:** ಹೊಸದಾಗಿ ಮದ್ಯದ ಅಂಗಡಿಗಳನ್ನು ತೆರೆಯಲು ಪ್ರಸ್ತಾಪ ಬಂದಿದ್ದು ನಿಜ. ಈ ವಿಚಾರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಮ್ಮ ನಿಲುವುಗಳನ್ನು ಸ್ಪಷ್ಟಪಡಿಸಿದ್ದಾರೆ. ರಾಜ್ಯದಲ್ಲಿ ಮದ್ಯದ ಹೊಸ ಅಂಗಡಿಗಳಿಗೆ ಲೈಸೆನ್ಸ್ ನೀಡುವುದಿಲ್ಲ. ಲೈಸೆನ್ಸ್ ನವೀಕರಣದ ವಿಚಾರವಾಗಿ ಶ್ರೀಗಳ ಅಭಿಪ್ರಾಯವನ್ನು ಮುಖ್ಯಮಂತ್ರಿಗಳೊಂದಿಗೆ ಮಾತನಾಡುವೆ ಎಂದರು.ರಾಜ್ಯದಲ್ಲಿ ಹದಿಹರೆಯದ ಯುವಕರೂ, ವಿದ್ಯಾರ್ಥಿಗಳು ಮದ್ಯದ ಹಾವಳಿಗೆ ಬಲಿಯಾಗಿದ್ದಾರೆ. ಇದರಿಂದ ಸಮಾಜದಲ್ಲಿ ಹಲವು ಅಶಾಂತಿಯ ವಾತಾವರಣವೂ ಸೃಷ್ಟಿಯಾಗುತ್ತಿದೆ. ಮದ್ಯ ನಿಷೇಧ ಮಾಡಿದ್ದ ಕೆಲವು ರಾಜ್ಯಗಳಲ್ಲಿ ಮತ್ತೆ ಮದ್ಯ ಮಾರಾಟಕ್ಕೆ ಅವಕಾಶ ನೀಡಿರುವ ಉದಾಹರಣೆಗಳು ಇವೆ ಎಂದು ಸಚಿವರು ತಿಳಿಸಿದರು.ಶ್ರೀಗಳ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು ಅಬಕಾರಿಯಿಂದ 36 ಸಾವಿರ ಕೋಟಿ ರೂ. ಆದಾಯ ಬರುತ್ತಿದೆ ಎಂದರು.ಹೊಳಲ್ಕೆರೆ ಮಾಜಿ ಶಾಸಕ ಎ.ವಿ. ಉಮಾಪತಿ, ಲಕ್ಕೀಸಾಗರ ಜಿಪಂ ಸದಸ್ಯ ಕೃಷ್ಣಮೂರ್ತಿ, ಹೊಳಲ್ಕೆರೆ ಯುವ ಕಾಂಗ್ರೆಸ್ ಮುಖಂಡ ರಘು, ಸಿರಿಗೆರೆ ಗ್ರಾಪಂ ಮಾಜಿ ಅಧ್ಯಕ್ಷ ಎಂ.ಜಿ. ದೇವರಾಜ್, ಮತ್ತಿತರರು ಹಾಜರಿದ್ದರು.ಚಿತ್ರದುರ್ಗ ಲೋಕಸಭಾ ಕ್ಷೇತ್ರದಿಂದ ಮುಂಬರುವ ಚುನಾವಣೆಯಲ್ಲಿ ಸ್ಪರ್ಧಿಸಲು ಸಚಿವರ ಪುತ್ರ ವಿನಯ ತಿಮ್ಮಾಪುರ ಮುಂದಾಗಿದ್ದಾರೆ. ಈ ವಿಚಾರವನ್ನು ಸಚಿವರು ಶ್ರೀಗಳ ಗಮನಕ್ಕೆ ತಂದರು. ಚಿತ್ರದುರ್ಗ ಕ್ಷೇತ್ರದಿಂದ ಈಗಾಗಲೇ ಕಾಂಗ್ರೆಸ್ ಉಪಾಧ್ಯಕ್ಷ ಬಿ.ಎನ್. ಚಂದ್ರಪ್ಪ, ಜಿ.ಎಸ್. ಮಂಜುನಾಥ್, ಎಚ್. ಆಂಜನೇಯ ಹಾಗೂ ಜೆಜೆ ಹಟ್ಟಿ ತಿಪ್ಪೇಸ್ವಾಮಿ ಅವರ ಹೆಸರುಗಳು ಕೇಳಿಬರುತ್ತಿದ್ದು ಅದರ ಜೊತೆಗೆ ಸಚಿವರ ಪುತ್ರ ವಿನಯ ಅವರ ಹೆಸರೂ ಈಗ ಪಟ್ಟಿಗೆ ಸೇರಿಕೊಂಡಿದೆ.

### ದಾವಣಗೆರೆ ತಾಲ್ಲೂಕು ಬೆಳವನೂರು ಗ್ರಾಮದಲಿ 25ರಂದು ಜನತಾ ದರ್ಶನ

» ದಾವಣಗೆರೆ

ದಾವಣಗೆರೆ ತಾಲ್ಲೂಕಿನ ಬೆಳವನೂರು ಗ್ರಾಮದಲ್ಲಿ ಅಕ್ಟೋಬರ್ 25 ರಂದು ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್ ಮಲ್ಲಿಕಾರ್ಜುನ್ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಜನತಾ ದರ್ಶನ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ತಿಳಿಸಿದ್ದಾರೆ. ಈ ಜನತಾ ದರ್ಶನ ಕಾರ್ಯಕ್ರಮದಲ್ಲಿ ಸಾರ್ವಜನಿಕರ ಕುಂದುಕೊರತೆಗಳನ್ನು ಸ್ವೀಕರಿಸಿ ಸ್ಥಳದಲ್ಲಿಯೇ ಪರಿಹಾರ ಕಂಡುಕೊಳ್ಳಲಾಗುತ್ತದೆ. ಜನತಾ ದರ್ಶನ ಕಾರ್ಯಕ್ರಮದಲ್ಲಿ ಸ್ವೀಕೃತವಾದ ಎಲ್ಲಾ ಅರ್ಜಿಗಳನ್ನು ಸಾರ್ವಜನಿಕ ಕುಂದುಕೊರತೆಯ ನಿವಾರಣೆ ವ್ಯವಸ್ಥೆಯ (ಖಕಊಖಖ) ತಂತ್ರಾಂಶದಲ್ಲಿ ದಾಖಲಾಸಲಾಗುತ್ತದೆ ಇದಕ್ಕಾಗಿ ಕುಂದುಕೊರತೆಗಳನ್ನು ದಾಖಲಿಸಲು ಇಲಾಖಾವಾರು ಪ್ರತ್ಯೇಕ ಕೌಂಟರ್‌ಗಳನ್ನು ತೆರೆಯಲಾಗುತ್ತದೆ. ಸಾರ್ವಜನಿಕರು ಜನತಾ ದರ್ಶನ ಸದುಪಯೋಗ ಮಾಡಿಕೊಳ್ಳುವಂತೆ ತಿಳಿಸಿದ್ದಾರೆ.

### ವಿದ್ಯುತ್ ವ್ಯತ್ಯಯ

» ದಾವಣಗೆರೆ

ಜಲಸಿರಿ ಯೋಜನೆಯಡಿಯಲ್ಲಿ ನಿರಂತರ ಶುದ್ಧಕುಡಿಯುವ ನೀರಿನ ಸರಬರಾಜು ಯೋಜನೆ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ಅ.18 ರಂದು ಬೆಳಗ್ಗೆ 10 ರಿಂದ 4 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.ಎಫ್-10 ಸಿ.ಜಿ.ಹೆಚ್ ಫೀಡರ್ ವ್ಯಾಪ್ತಿಯ ಪೋಲಿಸ್ ಕ್ವಾಟ್ರಸ್, ಎಂ.ಸಿ.ಸಿ.ಎ ಬ್ಲಾಕ್, ವಿನೋಬ ನಗರ, 1ನೇ ಮೇನ್ 2ನೇ ಮೇನ್ ಮುದ್ದಹಳ್ಳಿ ತೋಟ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.ಎಫ್-09 ಪಿ.ಜೆ ಫೀಡರ್ ವ್ಯಾಪ್ತಿಯ ಪಿ.ಜೆ ಎಕ್ಸ್‌ಟೇನೆಸನ್, ಎ.ವಿ.ಕೆ ಕಾಲೇಜ್‌ರಸ್ತೆ, ಪಿ.ಬಿ ರಸ್ತೆ, ಅರುಣಚಿತ್ರ ಮಂದಿರ ಸರ್ಕಲ್, ರಾಮ್ &ಕೋ-ಸರ್ಕಲ್ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳು. ಎಫ್-17 ಮಹಾನಗರ ಪಾಲಿಕೆ ವ್ಯಾಪ್ತಿಯ ಬೆವಿಕಂ ಆಫೀಸ್, ಪಿ.ಬಿರಸ್ತೆ, ಹಳೆ ಬಸ್ ನಿಲ್ದಾಣ, ಅರುಣ ಸರ್ಕಲ್, ಕಾರ್ಪೋರೇಷನ್‌ಆಫೀಸ್, ಎಕ್ಸ್ಟೆನ್ಷನ್ ಪೋಲಿಸ್ ಸ್ಟೇಷನ್, ಹಾಗೂ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಾಯವಾಗಲಿದೆ ಎಂದು ಬೆಸ್ಕಾಂ ಪ್ರಕಟಣೆಯಲ್ಲಿ ತಿಳಿಸಿದೆ.

### ಶಿವಮೊಗ್ಗದಲ್ಲಿ ಇಂದು ರೈತ ದಸರಾ ಉದ್ಘಾಟನೆ

» ಚಿತ್ರದುರ್ಗ

ಶಿವಮೊಗ್ಗ ಮಹಾನಗರ ಪಾಲಿಕೆ, ರೈತ ದಸರಾ ಸಮಿತಿ-2023 ಕೃಷಿ ಹಾಗೂ ಶಿವಮೊಗ್ಗ, ದಾವಣಗೆರೆ, ಚಿತ್ರದುರ್ಗ ಜಿಲ್ಲಾ ಸಹಕಾರ ಉತ್ಪಾದಕರ ಸಂಘಗಳ ಒಕ್ಕೂಟ ಮಾಚೇನಹಳ್ಳಿ ಇವರ ಸಹಯೋಗದೊಂದಿಗೆ ಅ.18 ರ ಇಂದು ನಡೆಯುವ ಕುವೆಂಪು ರಂಗಮಂದಿರದಲ್ಲಿ ಬೆಳಿಗ್ಗೆ 11 ಗಂಟೆಗೆ ನಡೆಯುವ ವೇದಿಕೆ ಕಾರ್ಯಕ್ರಮವನ್ನು ಚಿತ್ರದುರ್ಗ ಜಿಲ್ಲೆಯ ಪ್ರಗತಿಪರ ರೈತ, ಉದಯೋನ್ಮುಖ ಕೃಷಿ ಪಂಡಿತ, ರಾಜ್ಯ ಪ್ರಶಸ್ತಿ ವಿಜೇತ ಜ್ಞಾನೇಶ್ವರ ಕೆ.ಆರ್. ಉದ್ಘಾಟಿಸಲಿದ್ದಾರೆ.

**ಫಾಸ್ಟ್ ನ್ಯೂಸ್**

## ಫ್ರೂಟ್ಸ್ ತಂತ್ರಾಂಶದಲ್ಲಿ ಆಧಾರ್-ಪಹಣಿ ಜೋಡಣೆ ಆಂದೋಲನ

» **ಚಿತ್ರದುರ್ಗ**

ಬರ ಪರಿಹಾರ, ಬೆಳೆ ವಿಮೆ, ಬೆಂಬಲ ಬೆಲೆ ಯೋಜನೆ,ಬ್ಯಾಂಕ್ ಸಾಲ ಸೌಲಭ್ಯ ಹಾಗೂ ಇನ್ನಿತರೆ ಯೋಜನೆಯಡಿ ಸೌಲಭ್ಯ ಪಡೆಯಲು ಫ್ರೂಟ್ಸ್ ತಂತ್ರಾಂಶದಲ್ಲಿ ನೋಂದಣಿ ಹೊಂದಿರುವುದು ಕಡ್ಡಾಯವಾಗಿದೆ. ಚಿತ್ರದುರ್ಗ ಜಿಲ್ಲೆಯಲ್ಲಿ ಒಟ್ಟು 610353 ಕೃಷಿ ಯೋಗ್ಯ ತಾಕುಗಳಿದ್ದು (ಸರ್ವೇ ನಂಬರ್/ಪೋಡುಗಳು) ಅವುಗಳಲ್ಲಿ ಈಗಾಗಲೇ 404845 ತಾಕುಗಳನ್ನು ಫ್ರುಟ್ಸ್ ತಂತ್ರಾಂಶದಲ್ಲಿ ನೋಂದಣಿ ಮಾಡಲಾಗಿರುತ್ತದೆ. ಉಳಿದ 205508 ತಾಕುಗಳ ಜೋಡಣೆ ಬಾಕಿ ಇರುತ್ತದೆ. ಜಿಲ್ಲೆಯಲ್ಲಿ ಒಟ್ಟು 307160 ರೈತರು 404845 ಸರ್ವೆ ನಂಬರುಗಳನ್ನು ಫ್ರುಟ್ಸ್ ತಂತ್ರಾಂಶದಡಿ ಜೋಡಣೆ ಮಾಡಿಸಿ ವಿಶಿಷ್ಟ ಗುರುತಿನ ಸಂಖ್ಯೆ (ಎಫ್.ಐ.ಡಿ) ಪಡೆದಿರುತ್ತಾರೆ. ಉಳಿದ 205508 ತಾಕುಗಳನ್ನು (ಸರ್ವೇ ನಂಬರ್/ಪೋಡುಗಳು) ಜೋಡಣೆ ಮಾಡಿಸಿಕೊಳ್ಳಲು ಬಾಕಿ ಇದ್ದು, ಜರೂರಾಗಿ ಜೋಡಣೆ ಮಾಡಿಸಿಕೊಳ್ಳಲು ಕೋರಿದೆ. ಫ್ರೂಟ್ಸ್ ತಂತ್ರಾಂಶದಲ್ಲಿ ರೈತರು ತಮ್ಮ ಜಮೀನಿನ ವಿವರವನ್ನು ನೋಂದಾಯಿಸಿ ರೈತರ ಗುರುತಿನ ಚೀಟಿ ಸಂಖ್ಯೆ (ಎಫ್.ಐ.ಡಿ) ಪಡೆದುಕೊಳ್ಳುವುದು ಅವಶ್ಯವಾಗಿರುತ್ತದೆ. ಫ್ರೂಟ್ಸ್ ಮಾಹಿತಿಯು ಕೃಷಿ ಮತ್ತು ಕೃಷಿ ಸಂಬಂಧಿತ ಇಲಾಖೆಗಳಿಂದ ದೊರೆಯುವ ಸೌಲಭ್ಯಗಳನ್ನು ನೀಡುವ ಹೊರತಾಗಿಯು ಇತರೆ ಇಲಾಖೆಗಳಿಗೂ ಸಹ ಉತ್ತಮ ಮಾಹಿತಿಯಾಗಿದ್ದು, ಅತಿವೃಷ್ಟಿ, ಅನಾವೃಷ್ಟಿ ಪರಿಹಾರ, ಬೆಳೆ ವಿಮೆ, ಬೆಂಬಲ ಬೆಲೆ ಯೋಜನೆಯಡಿ ಫಲಾನುಭವಿಗಳಾಗಲು ಹಾಗೂ ಪರಿಹಾರದ ಮೊತ್ತ ರೈತರ ಖಾತೆಗೆ ನೇರವಾಗಿ ಜಮೆ ಮಾಡಲು ರೈತರು ಎಫ್.ಐ.ಡಿ ಹೊಂದಿರುವುದು ಕಡ್ಡಾಯ. ಸರ್ಕಾರವು 2023ರ ಮುಂಗಾರು ಹಂಗಾಮಿನ ಬೆಳೆ ನಷ್ಟ ಪರಿಹಾರವನ್ನು ಬೆಳೆ ಸಮೀಕ್ಷೆ ಮತ್ತು ಫ್ರೂಟ್ಸ್‌ನಲ್ಲಿ ನೊಂದಾವಣಿಯಾಗಿರುವ ಬೆಳೆ ಮತ್ತು ವಿಸ್ತೀರ್ಣಕ್ಕೆ ಅನುಗುಣವಾಗಿ ನೇರವಾಗಿ ರೈತರ ಖಾತೆಗೆ ಬಿಡುಗಡೆ ಮಾಡಲಿರುವುದರಿಂದ, ಈಗಾಗಲೇ ಫ್ರುಟ್ಸ್‌ನಲ್ಲಿ ನೋಂದಣಿಯಾಗಿರುವ 307160 ರೈತರು ತಮ್ಮ ಜಮೀನಿನ ಯಾವುದೇ ಸರ್ವೆ ನಂಬರ್ ಬಿಟ್ಟು ಹೋಗದಂತೆ ಎಲ್ಲಾ ಸರ್ವೇ ನಂಬರ್‌ಗಳನ್ನು ನೋಂದಾಯಿಸಿಕೊಳ್ಳಲು ತಿಳಿಸಿದೆ. ಫ್ರೂಟ್ಸ್‌ನಲ್ಲಿ ನೋಂದಣಿಯಾಗದಿರುವ ರೈತರು ಆಧಾರ್ ಕಾರ್ಡ್, ಪಹಣಿ, ಜಾತಿ ಪ್ರಮಾಣ ಪತ್ರ ಮತ್ತು ಬ್ಯಾಂಕ್ ಪಾಸ್ ಪುಸ್ತಕ ವಿವರಗಳನ್ನು ಈಖಗಖಖಿಖನಲ್ಲಿದಾಖಲಿಸಿಕೊಂಡುಕಂದಾಯ, ಕೃಷಿ, ತೋಟಗಾರಿಕೆ, ರೇಷ್ಮೆ, ಪಶುಸಂಗೋಪನೆ ಹಾಗೂ ವಿವಿಧ ಇಲಾಖೆಗಳ ಸೌಲಭ್ಯವನ್ನು ಪಡೆಯಲು ತಿಳಿಸಿದೆ.ಜಿಲ್ಲೆಯಾದ್ಯಂತ ಫ್ರೂಟ್ಸ್ ನೋಂದಣಿ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ರೈತ ಭಾಂದವರು ತಮ್ಮ ಜಮೀನಿನ ಎಲ್ಲಾ ಪಹಣಿಗಳಿಗೆ ಆಧಾರ್ ಸಂಖ್ಯೆ ಮತ್ತು ಬ್ಯಾಂಕ್ ವಿವರಗಳನ್ನು ಈ ಕೂಡಲೇ ಜೋಡಣೆ ಮಾಡಲು ನಿಮ್ಮ ಗ್ರಾಮದ ಆಡಳಿತಾಧಿಕಾರಿಗಳು, ನಾಡ ಕಛೇರಿ, ರೈತ ಸಂಪರ್ಕ ಕೇಂದ್ರ, ರೇಷ್ಮೆ ಇಲಾಖೆ ಹಾಗೂ ತೋಟಗಾರಿಕೆ ಇಲಾಖೆಗೆ ಸಂಪರ್ಕಿಸುವಂತೆ ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕು ತಿಳಿಸಿದ್ದಾರೆ.

## ಹಿಂಗಾರು ಹಂಗಾಮು: ಬೆಳೆ ವಿಮೆ ನೋಂದಣಿ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲೆಯಲ್ಲಿ 2023-24ನೇ ಸಾಲಿನ ಹಿಂಗಾರು ಹಂಗಾಮಿಗೆ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯನ್ನು ಜಾರಿಗೊಳಿಸಿ ಅಧಿಸೂಚಿಸಲಾಗಿದ್ದು, ಚಿತ್ರದುರ್ಗ ಜಿಲ್ಲೆಗೆ ಅಗ್ರಿಕಲ್ಚರಲ್ ಇನ್ಸೂರೆನ್ಸ್ ಕಂಪನಿ ಆಫ್ ಇಂಡಿಯಾ ಲಿಮಿಟೆಡ್ ಇವರು ಆಯ್ಕೆಯಾಗಿರುತ್ತಾರೆ. ಬೆಳೆ ಸಾಲ ಪಡೆದ ಮತ್ತು ಬೆಳೆ ಸಾಲ ಪಡೆಯದ ಆಸಕ್ತ ರೈತರು ಬೆಳೆ ವಿಮೆಗೆ ನೋಂದಣಿ ಮಾಡಲು ಜೋಳ (ಮಳೆಯಾಶ್ರಿತ), ಸೂರ್ಯಕಾಂತಿ (ನೀರಾವರಿ) ಸೂರ್ಯಕಾಂತಿ (ಮಳೆಯಾಶ್ರಿತ) ರಾಗಿ (ನೀರಾವರಿ), ಕುಸುಬೆ (ಮಳೆಯಾಶ್ರಿತ) ಬೆಳೆಗಳಿಗೆ 2023ರ ಡಿಸೆಂಬರ್ 1 ಕೊನೆಯ ದಿನ ಮತ್ತು ಭತ್ತ (ನೀರಾವರಿ), ಮುಸುಕಿನಜೋಳ (ನೀರಾವರಿ), ಮುಸುಕಿನಜೋಳ (ಮಳೆಯಾಶ್ರಿತ), ಗೋಧಿ(ನೀರಾವರಿ) ಕಡಲೆ(ಮಳೆಯಾಶ್ರಿತ) ಬೆಳೆಗಳಿಗೆ 2023ರ ಡಿಸೆಂಬರ್ 15 ಕೊನೆಯ ದಿನವಾಗಿದೆ. ಬ್ಯಾಂಕಿನಲ್ಲಿ ಬೆಳೆ ಸಾಲ ಮಂಜೂರಾದ ಎಲ್ಲಾ ರೈತರನ್ನು ಕಡ್ಡಾಯವಾಗಿ ಈ ಯೋಜನೆಯಡಿಯಲ್ಲಿ ಒಳಪಡಿಸಲಾಗುವುದು, ತದನಂತರ ಬೆಳೆ ಸಾಲ ಪಡೆದ ರೈತರು ಈ ಯೋಜನೆಯಲ್ಲಿ ಭಾಗವಹಿಸಲು ಇಚ್ಛೆ ಪಡದೇ ಇದ್ದಲ್ಲಿ, ಈ ಕುರಿತು ಬ್ಯಾಂಕಿನ ವ್ಯವಸ್ಥಾಪಕರಿಗೆ ಬೆಳೆ ನೋಂದಣಿ ಅಂತಿಮ ದಿನಾಂಕಕ್ಕಿಂತ 7 ದಿನಗಳು ಮುಂಚಿತವಾಗಿ ಲಿಖಿತವಾಗಿ ಮುಚ್ಚಳಿಕೆ ಪತ್ರವನ್ನು ನೀಡಿದಲ್ಲಿ ಅಂತಹ ರೈತರನ್ನು ಬೆಳೆ ವಿಮೆ ಯೋಜನೆಯಿಂದ ಕೈಬಿಡಲಾಗುವುದು.
ಆರ್ಥಿಕ ಸಂಸ್ಥೆಗಳು, ಬ್ಯಾಂಕ್, ಸಾರ್ವಜನಿಕ ಸೇವಾ ಕೇಂದ್ರಗಳಲ್ಲಿ ರೈತರನ್ನು ಬೆಳೆ ವಿಮೆಗೆ ನೋಂದಾಯಿಸಿದಾಗ ಬೆಳೆ ವಿಮೆ ಪ್ರಸ್ತಾವನೆಯನ್ನು ಹಾಗೂ ವಿಮಾ ಕಂತನ್ನು ನಿಗಧಿತ ಸಮಯದೊಳಗೆ ನಿಯಮಾನುಸಾರ ಅನುಷ್ಠಾನ ವಿಮಾ ಸಂಸ್ಥೆಗಳಿಗೆ ವರ್ಗಾಯಿಸಲು ಕ್ರಮಕೈಗೊಳ್ಳತಕ್ಕದ್ದು, ನೋಂದಣಿ ಪ್ರಕ್ರಿಯೆಯ ಹಂತದಲ್ಲಿ ಮೇಲೆ ತಿಳಿಸಿದ ಸಂಸ್ಥೆಗಳ ನಿರ್ಲಕ್ಷದಿಂದ ಯಾವುದೇ ಲೋಪ ದೋಷಗಳು ಉಂಟಾದಲ್ಲಿ ಅದರಿಂಗಾಗುವ ಬೆಳೆ ವಿಮೆ ಪರಿಹಾರ ವ್ಯಾಜ್ಯಗಳಿಗೆ ಸಂಬಂಧಿಸಿದ ಸಂಸ್ಥೆಗಳೆ ನೇರ ಹೊಣೆಗಾರರಾಗಿರುತ್ತಾರೆ. ಆಸಕ್ತ ರೈತರು ತಮ್ಮ ವ್ಯಾಪ್ತಿಯ ಬ್ಯಾಂಕುಗಳಲ್ಲಿ ಹಾಗೂ ಅನುಮೋದಿತ ಸಾರ್ವಜನಿಕ ಸೇವಾ ಕೇಂದ್ರಗಳಲ್ಲೂ ವಿಮೆಗೆ ನೋಂದಣಿ ಮಾಡಬಹುದಾಗಿದೆ. ವಿಮೆ ಸೌಲಭ್ಯ ಪಡೆಯಲು ಎಫ್‌ಐಡಿ (ಫ್ರೂಟ್ಸ್) ನೋಂದಣಿ ಹೊಂದಿರುವುದು ಕಡ್ಡಾಯ.

# ಸಹಕಾರ ಸಂಘಗಳಿಗೆ ಇತ್ತೀಚೆಗೆ ತಿದ್ದುಪಡಿಯಾದ ಕಾಯ್ದೆ ಕಾನೂನಿನ ತಿಳುವಳಿಕೆ ಅಗತ್ಯ: ತಿಪ್ಪೇಸ್ವಾಮಿ

» **ಚಿತ್ರದುರ್ಗ**





ಸಹಕಾರ ಸಂಘಗಳಿಗೆ ಸಂಬಂಧಪಟ್ಟಂತೆ ಇತ್ತೀಚೆಗೆ ತಿದ್ದುಪಡಿಯಾದ ಕಾಯ್ದೆ ಕಾನೂನುಗಳ ಬಗ್ಗೆ ಹಾಗೂ ಹೊಸ ಹೊಸ ಕಾಯ್ದೆ-ಕಾನೂನಿಗಳ ಪರಿಚಯ ಹಾಗೂ ತಿಳುವಳಿಕೆ ಸಹಕಾರ ಸಂಘಗಳ ಬ್ಯಾಂಕಿನ ಗ್ರಾಹಕರು, ನಿರ್ದೇಶಕರು ಹಾಗೂ ವ್ಯವಸ್ಥಾಪಕರಿಗೆ ಬಹಳ ಅಗತ್ಯವಾಗಿದೆ ಎಂದು ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕ ಹೆಚ್.ಎನ್.ತಿಪ್ಪೇಸ್ವಾಮಿ ಹೇಳಿದರು.

ನಗರದ ಸಹಕಾರ ಭವನ ಸಭಾಂಗಣದಲ್ಲಿ ಮಂಗಳವಾರ ರಾಜ್ಯ ಸಹಕಾರ ಮಹಾಮಂಡಳ, ಜಿಲ್ಲಾ ಸಹಕಾರ ಯೂನಿಯನ್ ವತಿಯಿಂದ ಹಮ್ಮಿಕೊಂಡಿದ್ದ ಚಿತ್ರದುರ್ಗ ಮತ್ತು ಹೊಸದುರ್ಗ ತಾಲ್ಲೂಕುಗಳಲ್ಲಿ ಬರುವ ಪತ್ತಿನ ಮತ್ತು ನೌಕರರ ಪತ್ತಿನ ಸಹಕಾರ ಸಂಘಗಳ ಅಧ್ಯಕ್ಷರಿಗೆ, ಉಪಾಧ್ಯಕ್ಷರಿಗೆ, ಆಡಳಿತ ಮಂಡಳಿಯ ನಿರ್ದೇಶಕರಿಗೆ ಹಾಗೂ ವ್ಯವಸ್ಥಾಪಕರಿಗೆ ಒಂದು ದಿನದ ವಿಶೇಷ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಹಕಾರ ಸಂಘಗಳ ಹೊಸ ಹೊಸ ಕಾಯ್ದೆ ಕಾನೂನಿನ ಅರಿವು ಪಡೆದು ಆ ಮೂಲಕ ರೈತರಿಗೆ, ಬ್ಯಾಂಕಿನ ಗ್ರಾಹಕರಿಗೆ ಸರ್ಕಾರದ ಸೌಲಭ್ಯಗಳನ್ನು ತಲುಪಿಸಲು ಸಹಕಾರಸಂಘಗಳಿಗೆಅನುಕೂಲವಾಗಲಿದೆ ಎಂದರು.

ಯಾವುದೇ ಬ್ಯಾಂಕ್ ಉತ್ತಮವಾಗಿ ಕಾರ್ಯನಿರ್ವಹಿಸಬೇಕಾದರೆ ಸಾಲ ವಸೂಲಾತಿ ಬಹಳ ಮುಖ್ಯ. ಜಿಲ್ಲೆಯಲ್ಲಿ ಬರದ ಪರಿಸ್ಥಿತಿ ಇದೆ, ಹೀಗಾಗಿ ಪರಿಸ್ಥಿತಿಯನ್ನು ಅವಲೋಕಿಸಿ ಗ್ರಾಹಕರೊಂದಿಗೆ ಉತ್ತಮ ಸಂಬಂಧ ಇಟ್ಟುಕೊಂಡು ಸಾಲ ವಸೂಲಾತಿ ಮಾಡಿ ಎಂದು ಮನವಿ ಮಾಡಿದರು.

ಸಹಕಾರ ರತ್ನ ಪುರಸ್ಕೃತರು ಹಾಗೂ ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕ ಜಿಂಕಲು ಬಸವರಾಜ್ ಮಾತನಾಡಿ, ಸಹಕಾರ ಪತ್ತಿನ ಸಂಘಗಳಲ್ಲಿ ಠೇವಣಿ ಇಟ್ಟಿರುವ ಗ್ರಾಹಕರ ಹಣವನ್ನು ಅವಧಿ ಮೀರಿದ ತಕ್ಷಣ ಗ್ರಾಹಕರು ಬಂದು ಕೇಳಿದಾಗ ಹಣ ನೀಡಬೇಕು. ಠೇವಣಿ ಇಟ್ಟಿರುವ ಗ್ರಾಹಕರ ಹಣ ಕೊಡದೇ ವಿಳಂಬ ಮಾಡಿದರೆ ಸಂಘದ ಬೆಳವಣಿಗೆಗೆ ಹಿನ್ನಡೆಯಾಗಲಿದೆ. ಗ್ರಾಹಕರು ಮತ್ತೆ ಮತ್ತೆ ನಮ್ಮ ಸಹಕಾರ ಸಂಘಗಳಲ್ಲಿ ಹಣವನ್ನು ಎಫ್‌ಡಿ ಮಾಡಬೇಕೆಂದರೆ ಗ್ರಾಹಕರ ನಂಬಿಕೆ ಉಳಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಚಿತ್ರದುರ್ಗ ಮತ್ತು ಹೊಸದುರ್ಗ ತಾಲ್ಲೂಕುಗಳಲ್ಲಿ ಬರುವ ಪತ್ತಿನ ಮತ್ತು ನೌಕರರ ಪತ್ತಿನ ಸಹಕಾರ ಸಂಘಗಳು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು, ಇನ್ನೂ ಹೆಚ್ಚಿನ ರೀತಿಯಲ್ಲಿ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕ ಹೆಚ್.ಎಂ. ದ್ಯಾಮಣ್ಣ ಮಾತನಾಡಿ, ಪತ್ತಿನ ಸಹಕಾರ ಸಂಘ, ನೌಕರರ ಪತ್ತಿನ ಸಹಕಾರ ಸಂಘಗಳಲ್ಲಿ ಎಲ್ಲಾ ವರ್ಗದ ಮಹಿಳೆಯರಿಗೆ ಆದ್ಯತೆ ನೀಡಬೇಕು. ಗ್ರಾಹಕರು ಸಹಕಾರ ಸಂಘಗಳಲ್ಲಿ ದ್ವಿಸದಸ್ಯತ್ವ ಪಡೆಯಬಾರದು. ಸಹಕಾರ ಸಂಘಗಳ ಆಡಳಿತ ಮಂಡಳಿ ನಿಷ್ಠುರವಾಗಿ ಕಾರ್ಯನಿರ್ವಹಿಸಬೇಕು. ಯಾವುದೇ ಸಂಬಂಧಗಳಿಗೆ ಆದ್ಯತೆ ನೀಡದೆ ನಿಸ್ವಾರ್ಥದಿಂದ ಸೇವೆ ಮಾಡಬೇಕು. ಎಲ್ಲಾ ವರ್ಗದವರ ಪ್ರೀತಿ ಗಳಿಸುವುದರ ಜೊತೆಗೆ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಜೆ.ಶಿವಪ್ರಕಾಶ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಈ ಹಿಂದೆ ವಾಣಿಜ್ಯ ಬ್ಯಾಂಕ್‌ಗಳು ಮಧ್ಯಮ ವರ್ಗದವರಿಗೆ, ಕುಶಲ ಕರ್ಮಿಗಳಿಗೆ, ಬೀದಿ ವ್ಯಾಪಾರಸ್ಥರಿಗೆ ಮತ್ತು ವರ್ತಕರಿಗೆ ಕಾನೂನು ಭದ್ರತೆ ಹಾಗೂ ವಸೂಲಾತಿ ಕಾರಣದಿಂದ ಸಾಲ ಕೊಡುವುದಕ್ಕೆ ಮುಂದಾಗುತ್ತಿರಲಿಲ್ಲ.

ಈ ಸಂದರ್ಭದಲ್ಲಿ ನಮ್ಮ ಹಿರಿಯರು, ಸಹಕಾರ ಧುರೀಣರು ಪತ್ತಿನ ಸಹಕಾರ ಸಂಘಗಳ ಸ್ಥಾಪನೆ ಮಾಡುವುದರ ಮೂಲಕ ಎಲ್ಲಾ ಮಧ್ಯಮ ವರ್ಗದವರಿಗೂ, ವರ್ತಕರಿಗೂ, ಬೀದಿ ವ್ಯಾಪಾರಿಗಳಿಗೂ, ಕುಶಲ ಕರ್ಮಿಗಳಿಗೂ ಆರ್ಥಿಕ ಸಹಾಯ ಮಾಡುವ ನಿಟ್ಟಿನಲ್ಲಿ ಮುಂದಾದರು ಎಂದು ತಿಳಿಸಿದರು.

ರಾಜ್ಯದಲ್ಲಿ 2,471 ಪತ್ತಿನ ಸಹಕಾರ ಸಂಘಗಳು ಕಾರ್ಯನಿರ್ವಹಿಸುತ್ತಿದ್ದು, ನೌಕರರ ಪತ್ತಿನ ಸಹಕಾರ ಸಂಘಗಳು ಸಹ ಅಂದಾಜು1,049ಕಾರ್ಯನಿರ್ವಹಿಸುತ್ತಿವೆ. ಸಹಕಾರ ಸಂಘಗಳ ಆರ್ಥಿಕ ಸಹಾಯ ಪಡೆದು ಮುಂದಿನ ದಿನಗಳಲ್ಲಿ ಪತ್ತಿನ ಸಹಕಾರ ಸಂಘಗಳನ್ನು ಸಧೃಢವಾಗಿ ಅಭಿವೃದ್ಧಿಯತ್ತ ಕೊಂಡೊಯ್ಯಬೇಕು ಎಂದು ಸಲಹೆ ನೀಡಿದರು.

ಸಹಕಾರ ಸಂಘಗಳಲ್ಲಿ ಸಾಲ ವಸೂಲಾತಿ ಮಾಡುವ ವಿಧಾನ ಮತ್ತು ಎನ್‌ಪಿಎ ಕುರಿತು, ಇತ್ತೀಚೆಗೆ ತಿದ್ದುಪಡಿಯಾದ ಕಾಯ್ದೆ ಕಾನೂನಿನ ಮುಖ್ಯಾಂಶಗಳ ಕುರಿತು ಮತ್ತು ಆಡಳಿತ ಮಂಡಳಿ ನಿರ್ದೇಶಕರ ಜವಾಬ್ದಾರಿಗಳು ಮತ್ತು ಕರ್ತವ್ಯಗಳ ಕುರಿತು ಮತ್ತು ಸಹಕಾರ ಸಂಘಗಳಲ್ಲಿ ಚುನಾವಣೆ ಜರುಗಿಸುವ ವಿಧಾನದ ಕುರಿತು ಸಹಕಾರ ಸಂಘಗಳ ನಿವೃತ್ತ ಅಪರ ನಿಬಂಧಕ ಹೆಚ್.ಎಸ್.ನಾಗರಾಜಯ್ಯ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕ ಜಿ.ಈ.ಅಜ್ಜಪ್ಪ, ಸಹಕಾರ ಸಂಘಗಳ ಉಪನಿಬಂಧಕ ಟಿ.ಮಧು ಶ್ರೀನಿವಾಸ್, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ ಸಹಾಯಕ ನಿರ್ದೇಶಕ ಪಿ.ಅಂಜನಮೂರ್ತಿ ಸೇರಿದಂತೆ ಚಿತ್ರದುರ್ಗ ಮತ್ತು ಹೊಸದುರ್ಗ ತಾಲ್ಲೂಕುಗಳಲ್ಲಿ ಬರುವ ಪತ್ತಿನ ಮತ್ತು ನೌಕರರ ಪತ್ತಿನ ಸಹಕಾರ ಸಂಘಗಳ ಅಧ್ಯಕ್ಷರು, ಉಪಾಧ್ಯಕ್ಷರು, ಆಡಳಿತ ಮಂಡಳಿಯ ನಿರ್ದೇಶಕರು ಹಾಗೂ ವ್ಯವಸ್ಥಾಪಕರು ಇದ್ದರು.

# ಡಿಎಸ್‌ಹಳ್ಳಿ: ಆಯುಷ್ ಸೇವಾ ಗ್ರಾಮ ಉದ್ಘಾಟನೆ

» **ಚಿತ್ರದುರ್ಗ**



ಚಿತ್ರದುರ್ಗ ತಾಲ್ಲೂಕಿನ ದೊಡ್ಡಸಿದ್ದವ್ವನಹಳ್ಳಿ ಗ್ರಾಮ ಪಂಚಾಯಿತಿ ಆವರಣದಲ್ಲಿ ಈಚೆಗೆ ಆಯುಷ್ ಸೇವಾ ಗ್ರಾಮ ಎಂಬ ವಿನೂತನ ಕಾರ್ಯಕ್ರಮ ಉದ್ಘಾಟಿಸಲಾಯಿತು. ಆಯುಷ್ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಆಯುಷ್ ಸೇವಾ ಗ್ರಾಮ ಕಾರ್ಯಕ್ರಮವನ್ನು ಗ್ರಾಮ ಪಂಚಾಯಿತಿ ಅಧ್ಯಕ್ಷೆ ಭಾಗ್ಯ ದೇವೇಂದ್ರಪ್ಪ, ಗ್ರಾಮ ಪಂಚಾಯಿತಿ ಸದಸ್ಯರಾದ ವನಿತಾ, ವಿದ್ಯಾವತಿ, ವನಿತಮ್ಮ, ಸತ್ಯಮ್ಮ ರೆಹಮಾನ್, ತಿಮ್ಮಾರೆಡ್ಡಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಎನ್.ಶಿಲ್ಪಾ ಸೇರಿದಂತೆ ಮತ್ತಿತರರು ಉದ್ಘಾಟಿಸಿದರು.

ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ್ ನಾಗಸಮುದ್ರ ಮಾತನಾಡಿ, ಆಯುಷ್ ಸೇವಾ ಗ್ರಾಮದಲ್ಲಿ ಆಯುಷ್ ವೈದ್ಯಾಧಿಕಾರಿಗಳು ನಿಯಮಿತವಾಗಿ ನಿಮ್ಮ ಮನೆ ಬಾಗಿಲಿಗೆ ಆಗಮಿಸಿ, ತಪಾಸಣೆ ಮಾಡಿ ಉಚಿತವಾಗಿ ಔಷಧಿಗಳನ್ನು ನೀಡುವರು ಹಾಗೂ ಸಮಗ್ರ ಆರೋಗ್ಯಕ್ಕೆ ಅವಶ್ಯಕವಾದ ನೈರ್ಮಲ್ಯ ಜೀವನಶೈಲಿ ಪಥ್ಯ ಹಾಗೂ ಮನೆ ಮದ್ದುಗಳ ಬಗ್ಗೆ ಉಪನ್ಯಾಸ ನೀಡಲಿದ್ದಾರೆ. ಈ ಕಾರ್ಯಕ್ರಮದ ಪೂರ್ಣ ಪ್ರಯೋಜನವನ್ನು ಗ್ರಾಮಸ್ಥರು ಪಡೆದುಕೊಳ್ಳಬೇಕು ಎಂದು ತಿಳಿಸಿದರು.ಕಾರ್ಯಕ್ರಮದಲ್ಲಿ ಆಯುಷ್ ವೈದ್ಯಾಧಿಕಾರಿಗಳಾದ ಡಾ.ಜಗದೀಶ್, ಡಾ.ದೇವರಾಜ್ ಸುರಹೊನ್ನೆ, ಡಾ.ಉಮೇಶ್ ರೆಡ್ಡಿ, ಉದಯಭಾಸ್ಕರ್, ಡಾ.ವಿಜಯಲಕ್ಷ್ಮಿ, ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳಾದ ಡಾ.ನಾಝಿಯಾ ಹಾಗೂ ಸಂಚಾರಿ ಆರೋಗ್ಯ ಘಟಕದ ವೈದ್ಯರು ಹಾಗೂ ಸಿಬ್ಬಂದಿ ವರ್ಗದವರು, ಯೋಗ ತರಬೇತುದಾರ ರವಿಅಂಬೇಕರ್, ಆಶಾ ಕಾರ್ಯಕರ್ತೆಯರು, ಅಂಗವಾಡಿ ಕಾರ್ಯಕರ್ತರು ಹಾಜರಿದ್ದರು. ಡಾ.ಶೇಖರಯ್ಯ.ಜಿ.ಮಠದ್ ಅವರು ಸ್ವಾಗತಿಸಿದರು. ಡಾ.ನಾಗರಾಜ ನಾಯ್ಕ್ ಅವರು ನಿರೂಪಿಸಿದರು. ಡಾ.ಟಿ.ಶಿವಕುಮಾರ್ ವಂದನಾರ್ಪಣೆ ಸಲ್ಲಿಸಿದರು. ಸಮಾರಂಭದ ಅಂಗವಾಗಿ ಏರ್ಪಡಿಸಿದ್ದ ಉಚಿತ ಆರೋಗ್ಯ ಶಿಬಿರದಲ್ಲಿ 150ಕ್ಕೂ ಹೆಚ್ಚು ಜನ ಪ್ರಯೋಜನ ಪಡೆದರು.

# ಕೆಎಸ್‌ಆರ್‌ಟಿಸಿ ಬಸ್ ಬೈಕ್ ಡಿಕ್ಕಿ: ಓರ್ವನ ಸಾವು

» **ಚಳ್ಳಕೆರೆ**

ಚಳ್ಳಕೆರೆ ಠಾಣಾ ವ್ಯಾಪ್ತಿಯ ವೀರದಿಮ್ಮನಹಳ್ಳಿ ಕ್ರಾಸ್ ಬಳಿ ಮಂಗಳವಾರ ಚಳ್ಳಕೆರೆ ಯಿಂದ ನಾಯಕನಹಟ್ಟಿಗೆ ಹೋಗುತ್ತಿದ್ದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆಬಸ್ ಎದುರಿಗೆಬಂದ ಮೋಟಾರ್ ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮವಾಗಿ ಬೈಕ್‌ನಲ್ಲಿ ಪ್ರಯಾಣಿಸುತ್ತಿದ್ದ ಮೂವರು ಯುವಕರಿಗೆ ಪ್ರಾಣಾಂತಿಕ ಗಾಯವಾಗಿವೆ. ಈ ಬಗ್ಗೆ ದೂರು ನೀಡಿರುವ ಎಂ.ಎಂ.ಸಣ್ಣಮಲ್ಲಯ್ಯ, ಕೆಎಸ್‌ಆರ್‌ಟಿಸಿ ಬಸ್ ಚಾಲಕನ ಅತಿವೇಗ ಚಾಲನೆ ಹಾಗೂ ನಿರ್ಲಕ್ಷ್ಯದಿಂದ ಈ ಅಪಘಾತ ಸಂಭವಿಸಿದ್ದು, ಸದರಿ ಅಪಘಾತದಲ್ಲಿ ಮಲ್ಲೂರಹಳ್ಳಿಯ ಪುನಿತ(19), ನವೀನ್(22), ಮಲ್ಲೇಶ್(19) ಇವರು ಗಾಯಗೊಂಡಿದ್ದು, ಇಲ್ಲಿನ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿ ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಆದರೆ, ತೀರ್ವವಾಗಿ ಗಾಯಗೊಂಡಿದ್ದ ನವೀನ್ ಜಿಲ್ಲಾ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದು, ಉಳಿದ ಇಬ್ಬರು ಗಾಯಾಳುಗಳು ಚಿಕಿತ್ಸೆ ಪಡೆಯುತ್ತಿದ್ದಾರೆ. ಅಪಘಾತವೆಸಗಿದ ಬಸ್ ಚಾಲಕನ ವಿರುದ್ಧ ಕ್ರಮ ಕೈಗೊಳ್ಳುವಂತೆ ದೂರು ನೀಡಿರುತ್ತಾರೆ. ಠಾಣಾಧಿಕಾರಿ ಶಿವಕುಮಾರ್ ಪ್ರಕರಣ ದಾಖಲಿಸಿದ್ದಾರೆ.



**ಅಕ್ರಮ ಮದ್ಯ ಮಾರಾಟ** :ತಾಲ್ಲೂಕಿನ ಯಲಗಟ್ಟೆ ಗ್ರಾಮದ ಚಿಲ್ಲರೆ ಅಂಗಡಿಯಲ್ಲಿ ಅಬಕಾರಿ ಇಲಾಖೆಯ ಯಾವುದೇ ಅಧಿಕೃತ ಪರವಾನಿಗೆ ಇಲ್ಲದೆ ಅಕ್ರಮ ಮದ್ಯ ಮಾರಾಟ ಮಾಡುತ್ತಿದ್ದ ಶಿವಮ್ಮ(48) ಇವರ ವಿರುದ್ಧ ಪ್ರಕರಣ ದಾಖಲು ಮಾಡಲಾಗಿದೆ. ತಾಲ್ಲೂಕಿನ ಗೋಪನಹಳ್ಳಿ ಗ್ರಾಮದ ಚಿಲ್ಲರೆ ಅಂಗಡಿಯಲ್ಲಿ ಅಕ್ರಮ ಮದ್ಯ ಮಾರಾಟ ಮಾಡುತ್ತಿದ್ದ ರೆಡ್ಡಪ್ಪ(53) ಪೊಲೀಸರು ವಶಕ್ಕೆ ಪಡೆದು ಆತನ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ. ಕುಡಿಯುವ ನೀರಿನ ಘಟಕದ ಕಾಯಿನ್ ಬಾಕ್ ಕಳ್ಳತನ :- ನಗರದ ತಾಲ್ಲೂಕು ಪಂಚಾಯಿತಿ ಮತ್ತು ಶಾಸಕರ ಭವನದ ಆವರಣದಲ್ಲಿರುವ ನಗರಸಭೆಯ ಶುದ್ಧ ಕುಡಿಯುವ ನೀರಿನ ಘಟಕದ ಕಾಯಿನ್ ಬಾಕ್ಸನ್ನು ಯಾರೋ ಕಳ್ಳರು ಕಳ್ಳತನ ಮಾಡಿಕೊಂಡು ಹೋಗಿರುತ್ತಾರೆ.

## ರಾಜ್ಯ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ಸ್ಪರ್ಧೆ

**ದಾವಣಗೆರೆ:** 2022-23ನೇ ಸಾಲಿನ ರಾಜ್ಯ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು ತುಮಕೂರು ಜಿಲ್ಲಾ ಕ್ರೀಡಾಂಗಣದಲ್ಲಿ ಅಕ್ಟೋಬರ್ 27 ರಿಂದ 29 ರವರೆಗೆ ಆಯೋಜಿಸಲಾಗಿದೆ. ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟದಲ್ಲಿ ವೈಯಕ್ತಿಕ ಸ್ಪರ್ಧೆಗಳಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದವರು ಮತ್ತು ಗುಂಪು ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನ ಪಡೆದು ಈಗಾಗಲೇ ಆನ್‌ಲೈನ್‌ನಲ್ಲಿ ನೋಂದಣಿ ಮಾಡಿಕೊಂಡ ಕ್ರೀಡಾಪಟುಗಳು ರಾಜ್ಯ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟದಲ್ಲಿ ಭಾಗವಹಿಸಲು ಅರ್ಹರಿರುತ್ತಾರೆ. ಅರ್ಹ ಕ್ರೀಡಾಪಟುಗಳು ಅಕ್ಟೋಬರ್ 27 ರಂದು ಬೆಳಿಗ್ಗೆ 9 ಗಂಟೆಯೊಳಗಾಗಿ ತುಮಕೂರು ಜಿಲ್ಲಾ ಕ್ರೀಡಾಂಗಣದಲ್ಲಿ ವರದಿ ಮಾಡಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ದಾವಣಗೆರೆ ಇಲ್ಲಿ ಅಥವಾ ದೂ. ಸಂ. 08192-237480 ಗೆ ಸಂಪರ್ಕಿಸಲು ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ವೀರೇಶ್ ಎಸ್ ಒಡೇನಪುರ ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

### ಕನ್ನಡ ರಕ್ಷಣಾ ಮತ್ತು ಸಾಂಸ್ಕೃತಿಕ ವೇದಿಕೆ ಆಕ್ರೋಶ

# ಕರ್ನಾಟಕದ ಗಡಿಯಲ್ಲಿ ತೆಲಗು ನಾಮಫಲಕ ಅಳವಡಿಕೆ

» **ಚಳ್ಳಕೆರೆ**





ತಾಲ್ಲೂಕಿನಗಡಿಭಾಗಗಳಲ್ಲಿಕನ್ನಡಭಾಷೆಯ ಬಳಕೆ ಕಡಿಮೆಯಾಗುತ್ತಿದ್ದು, ಇದರಿಂದ ಕನ್ನಡಿಗರ ಸ್ವಾಭಿಮಾನಕ್ಕೆ ದಕ್ಕೆಯಾಗುತ್ತಿದೆ. ಅನ್ಯಭಾಷೆಯ ನಾಮಫಲಕಗಳು ಸಹ ಗಡಿಭಾಗದಲ್ಲಿ ರಾರಾಜಿಸುತ್ತಿರುವ ಬಗ್ಗೆ ತಾಲ್ಲೂಕು ಆಡಳಿತ, ಸಂಬಂಧಪಟ್ಟ ಗ್ರಾಮ ಪಂಚಾಯಿತಿ ಅಂತಹ ಫಲಕಗಳನ್ನು ತೆರವುಗೊಳಿಸುವ ಕಾರ್ಯಕ್ಕೆ ಮುಂದಾಗಬೇಕೆಂದು ಕನ್ನಡ ರಕ್ಷಣಾ ಮತ್ತು ಸಾಂಸ್ಕೃತಿಕ ವೇದಿಕೆ ಅಧ್ಯಕ್ಷ, ಪತ್ರಕರ್ತ ಕೊರ್ಲಕುಂಟೆ ತಿಪ್ಪೇಸ್ವಾಮಿ ತಿಳಿಸಿದರು.

ಅವರು, ಮಂಗಳವಾರ ಪರಶುರಾಮಪುರ ಗಡಿಭಾಗದ ಪರಶುರಾಮಪುರ, ಕೊರ್ಲಕುಂಟೆ-ಪುಟ್ಲಾರಹಳ್ಳಿ ರಸ್ತೆಯ ಬಳಿ ತೆಲಗು ಭಾಷೆಯ ನಾಮಫಲಕಗಳಿಗೆ ಮಸಿ ಬಳಿಯುವ ಮೂಲಕ ಪ್ರತಿಭಟನೆ ನಡೆಸಿ ಮಾತನಾಡಿದರು. ಸದರಿ ರಸ್ತೆ ಕರ್ನಾಟಕಕ್ಕೆ ಸೇರಿದ್ದಾದರೂ ಯಾವುದೇ ಅನುಮತಿ ಇಲ್ಲದೆ ತೆಲಗು ನಾಮಫಲಕಗಳು ರಾರಾಜಿಸುತ್ತಿದ್ದು, ಇವುಗಳನ್ನು ಅಳವಡಿಸಲು ಅನುಮತಿ ಪಡೆದಿಲ್ಲ. ಈ ಬಗ್ಗೆ ತಾಲ್ಲೂಕು ಆಡಳಿತ ಸಹ ನಿರ್ಲಕ್ಷ್ಯೆ ವಹಿಸಿದೆ ಎಂದು ಆರೋಪಿಸಿದರು.

ಗಡಿಭಾಗದಲ್ಲಿ ಕನ್ನಡ ಭಾಷಾ ಜಾಗೃತಿಗೆ ಪ್ರತಿಯೊಬ್ಬ ಕನ್ನಡಿಗರ ಜಾಗೃತಿ ಇರಬೇಕು. ವಾಣಿಜ್ಯ ವ್ಯಾಪಾರಕ್ಕಾಗಿ ಆರಂಭವಾಗುತ್ತಿರುವ ಅಂಗಡಿ ಮತ್ತು ಸಂಸ್ಥೆಗಳ ಮೇಲೆ ತೆಲುಗು ನಾಮಫಲಕಗಳು ಸ್ಥಾಪಿಸುವರ ವಿರುದ್ಧ ಸ್ಥಳೀಯ ಪಂಚಾಯಿತಿ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ತೆಲುಗು ಭಾಷೆ ಬಳಸುವ ಮಾಲೀಕರಿಗೆ ನೋಟೀಸ್ ಜಾರಿ ಮಾಡುವ ಮೂಲಕ ಅಂಗಡಿ ಪರವಾನಗಿ ರದ್ದುಪಡಿಸಬೇಕು. ಗಡಿಭಾಗದಲ್ಲಿ ಭಾಷೆಯ ರಕ್ಷಣೆ ಮಾಡಿಕೊಳ್ಳುವುದು ಯಾವುದೋ ಒಂದು ಸಂಘಟನೆ ಮತ್ತು ಸಂಸ್ಥೆಯವರ ಜವಾಬ್ದಾರಿ ಎನ್ನುವ ನಿರ್ಲಕ್ಷ್ಯ ದೂರವಾಗಬೇಕು. ಇಲ್ಲಿನ ನೆಲ, ಗಾಳಿ, ಬೆಳಕು ಬೆಳಸಿಕೊಂಡು ವ್ಯವಹಾರ ಆರಂಭಿಸುವ ಪ್ರತಿಯೊಬ್ಬರಿಗೂ ಈ ನೆಲದ ಸಂಸ್ಕೃತಿ ಮತ್ತು ಭಾಷೆಯ ಗೌರವ ಇರಬೇಕು ಎಂದು ಹೇಳಿದರು. ತೆಲುಗು ಭಾಷೆಯಲ್ಲಿ ನಾಮಫಕ ಬರೆಸಿದ್ದ ವ್ಯಾಪಾರ ಮಾಲೀಕ ನಾಗೇಶ್ ಮಾತನಾಡಿ, ಗಡಿಭಾಗದಲ್ಲಿ ಭಾಷಾ ರಕ್ಷಣೆಗೆ ಪ್ರತಿಯೊಬ್ಬರೂ ಎಚ್ಚರವಾಗಿರಬೇಕಾಗಿದೆ. ಕಣ್ತಪ್ಪಿನಿಂದ ತೆಲುಗು ಭಾಷೆಯ ನಾಮಫಲಕ ಸ್ಥಾಪನೆ ಮಾಡಲಾಗಿದೆ. ಸ್ವತಃ ನನ್ನ ಕೈಯಾರೆ ಕಪ್ಪು ಮಸಿ ಬಳಿಯುವ ಮೂಲಕ ಇನ್ನು ಮುಂದೆ ಇಂತಹ ತಪ್ಪು ಮಾಡುವುದಿಲ್ಲ ಎಂದು ನಾಮಫಲಕಕ್ಕೆ ಕಪ್ಪು ಮಸಿ ಬಳಿಯಲಾಯಿತು. ಸ್ಥಳೀಯರಾದ ನಾಗೇಶ್, ಗ್ರಾಪಂ ಮಾಜಿ ಸದಸ್ಯ ಡಿ. ಸಿರಿಯಣ್ಣ, ಕೆ.ವಿ. ಪ್ರಸನ್ನ, ಮೀಸೆ ಮಹಾಲಿಂಗಪ್ಪ ಉಪಸ್ಥಿತರಿದ್ದರು.

ಫಾಸ್ಟ್ ನ್ಯೂಸ್

## ಹೊಸದುರ್ಗ: ಅ.30ರಂದು ತಾಲ್ಲೂಕುಮಟ್ಟದ "ಜನತಾ ದರ್ಶನ"

» ಚಿತ್ರದುರ್ಗ

ಜಿಲ್ಲಾಧಿಕಾರಿ ದಿವ್ಯಪ್ರಭು ನೇತೃತ್ವದಲ್ಲಿ ಇದೇ ಅಕ್ಟೋಬರ್ 30ರಂದು ಬೆಳಿಗ್ಗೆ 10ಕ್ಕೆ ಹೊಸದುರ್ಗ ನಗರದ ಶ್ರೀ ಸಿದ್ದರಾಮೇಶ್ವರ ಸಮುದಾಯ ಭವನದಲ್ಲಿ ತಾಲ್ಲೂಕು ಮಟ್ಟದ "ಜನತಾ ದರ್ಶನ" ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಪ್ರತಿ ತಿಂಗಳು ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮ ಹಾಗೂ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಪ್ರತಿ 15 ದಿನಗಳಿಗೊಮ್ಮೆ ತಾಲ್ಲೂಕು ಮಟ್ಟದ ಜನತಾ ದರ್ಶನ ಕಾರ್ಯಕ್ರಮ ಹಮ್ಮಿಕೊಂಡು, ಜನರ ಅಹವಾಲು ಆಲಿಸಿ ಸಮಸ್ಯೆಗಳಿಗೆ ಪರಿಹಾರೋಪಾಯಗಳನ್ನು ಒದಗಿಸುವ ನಿಟ್ಟಿನಲ್ಲಿ ಸೂಕ್ತ ಕ್ರಮವಹಿಸಲಾಗುತ್ತದೆ. ಸಾರ್ವಜನಿಕರು ತಾಲ್ಲೂಕು ಮಟ್ಟದ ಜನತಾ ದರ್ಶನದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ತಮ್ಮ ಅಹವಾಲುಗಳನ್ನು ಸಲ್ಲಿಸಬಹುದು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ತಿಳಿಸಿದ್ದಾರೆ.

## ಅ.18ರಂದು ತಾ.ಪಂ ತ್ರೈಮಾಸಿಕ ಕೆ.ಡಿ.ಪಿ ಸಭೆ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕು ಪಂಚಾಯಿತಿ ಮೊದಲನೇ ತ್ರೈಮಾಸಿಕ ಕೆ.ಡಿ.ಪಿ ಸಭೆಯನ್ನು ಇದೇ ಅಕ್ಟೋಬರ್ 18ರಂದು ಬೆಳಿಗ್ಗೆ 11ಕ್ಕೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಿಗಧಿಪಡಿಸಲಾಗಿದೆ. ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಸಭೆಯ ಅಧ್ಯಕ್ಷತೆ ವಹಿಸುವರು ಎಂದು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಹೆಚ್.ಹನುಮಂತಪ್ಪ ತಿಳಿಸಿದ್ದಾರೆ.

## ಅ.27 ರಿಂದ 29 ರವರೆಗೆ ರಾಜ್ಯಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ

» ಚಿತ್ರದುರ್ಗ

2022-23ನೇ ಸಾಲಿನ ರಾಜ್ಯ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟವನ್ನು ಇದೇ ಅಕ್ಟೋಬರ್ 27 ರಿಂದ 29 ರವರೆಗೆ ತುಮಕೂರು ಜಿಲ್ಲಾ ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿದೆ. 2022-23ನೇ ಸಾಲಿನ ಚಿತ್ರದುರ್ಗ ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಯ ವೈಯುಕ್ತಿಕ ಸ್ಪರ್ಧೆಯಲ್ಲಿ ಪ್ರಥಮ ಮತ್ತು ದ್ವಿತೀಯ ಹಾಗೂ ಗುಂಪು ಆಟಗಳಲ್ಲಿ ಪ್ರಥಮ ಸ್ಥಾನ ಪಡೆದವರು ಮಾತ್ರ ಈ ರಾಜ್ಯ ಮಟ್ಟದ ಕ್ರೀಡಾಕೂಟದಲ್ಲಿ ಇಲಾಖೆಯಿಂದ ಗುರುತಿನ ಪತ್ರ ಪಡೆದು ಭಾಗವಹಿಸಬಹುದಾಗಿರುತ್ತದೆ. ಕ್ರೀಡಾಪಟುಗಳು ಅಕ್ಟೋಬರ್ 27ರಂದು ತುಮಕೂರು ಜಿಲ್ಲಾ ಕ್ರೀಡಾಂಗಣದಲ್ಲಿ ವರದಿ ಮಾಡಿಕೊಳ್ಳಲು ಕೋರಲಾಗಿದೆ. ಕ್ರೀಡಾಕೂಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಗುರುತಿನ ಪತ್ರವನ್ನು ರಾಜ್ಯ ಸರ್ಕಾರಿ ನೌಕರರ ಸಂಘ ಚಿತ್ರದುರ್ಗ ಘಟಕದ ಜಿಲ್ಲಾ ಕಾರ್ಯದರ್ಶಿ ಎಸ್.ಕೆ. ಮಂಜುನಾಥ ಅವರ ದೂರವಾಣಿ ಸಂಖ್ಯೆ 9844412448, ಜಿಲ್ಲಾ ಖಜಾಂಚಿ ಬಿ. ವಿರೇಶ್ ದೂರವಾಣಿ ಸಂಖ್ಯೆ 9880409874 ಗೆ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗಾರೆಹಟ್ಟಿ ಬಿ. ಶ್ರೀಧರ್ ನಿಧನ

» ಚಿತ್ರದುರ್ಗ



ನಗರದ ಮೆದೆಹಳ್ಳಿ ರಸ್ತೆಯ ಈಶ್ವರ ಬಡಾವಣೆಯಲ್ಲಿ ವಾಸವಾಗಿದ್ದ ಗಾರೆಹಟ್ಟಿ ಬಿ ಶ್ರೀಧರ್ ಅವರು 17-10-2023 ಮಂಗಳವಾರ ದೈವಾಧೀನರಾಗಿದ್ದು ಮೃತರ ಅಂತ್ಯಕ್ರಿಯೆಯನ್ನು ದಿನಾಂಕ : 18-10-2023 ಬುಧವಾರ ಬೆಳಗ್ಗೆ 10.30ಕ್ಕೆ ಮೆದೆಹಳ್ಳಿ ರುದ್ರಭೂಮಿಯಲ್ಲಿ ನೆರವೇರಲಿದೆ. ಮೃತರು ಅಪಾರ ಬಂಧು ಬಳಗ, ಮಿತ್ರರನ್ನು ಅಗಲಿದ್ದಾರೆ ಎಂದು ಕುಟುಂಬದವರು ತಿಳಿಸಿದ್ದಾರೆ.ಶ್ರೀಯುತರು ಬಸವೇಶ್ವರ ಪುನರಜ್ಯೋತಿ ಐ ಬ್ಯಾಂಕ್(ರಿ.), ಬಸವೇಶ್ವರ ಮೆಡಿಕಲ್ ಕಾಲೇಜು ಆಸ್ಪತ್ರೆ, ಚಿತ್ರದುರ್ಗ ಇಲ್ಲಿಗೆ ತಮ್ಮ ಅಮೂಲ್ಯ ಕಣ್ಣುಗಳನ್ನು ನೇತ್ರದಾನ ಮಾಡಿ ಅಂಧರ ಬಾಳಿನಲ್ಲಿ ಬೆಳಕು ಮೂಡಿಸುವ ಮಹಾನ್ ಕಾರ್ಯಗೈದಿದ್ದಾರೆ

## ದ್ವಿತೀಯ ಸ್ಥಾನ ಪಡೆದ ಕ್ರೀಡಾ ವಸತಿ ನಿಲಯದ ಖೋ-ಖೋ ತಂಡ

ದಾವಣಗೆರೆ: ಮೈಸೂರಿನ ಶ್ರೀ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ನಡೆದ ರಾಜ್ಯ ಮಟ್ಟದ ಪ್ರತಿಭಾನ್ವೇಷಣಾ ದಸರಾ ಸಿ.ಎಂ. ಕಪ್ ಕ್ರೀಡಾಕೂಟದ ಖೋ-ಖೋ ಸ್ಪರ್ಧೆಯಲ್ಲಿ ದಾವಣಗೆರೆ ಕ್ರೀಡಾ ವಸತಿ ನಿಲಯದ ಪುರುಷರ ಖೋ-ಖೋ ತಂಡವು ಉತ್ತಮ ಪ್ರದರ್ಶನ ನೀಡಿ, ದ್ವಿತೀಯ ಸ್ಥಾನ ಪಡೆದುಕೊಂಡಿದೆ.

# ವಕ್ಫ್ ಬೋರ್ಡ್ ಆಸ್ತಿಗಳಲ್ಲಿ ವಸತಿ, ಆಸ್ಪತ್ರೆ ಹಾಗೂ ಕಾಲೇಜುಗಳ ನಿರ್ಮಾಣ ಚಿಂತನೆ: ಸಚಿವ ಜಮೀರ್

» ಚಿತ್ರದುರ್ಗ

ರಾಜ್ಯದ ಪ್ರತಿ ತಾಲ್ಲೂಕಿನಲ್ಲೂ ವಕ್ಫ್ ಬೋರ್ಡ್ ಆಸ್ತಿಗಳಿವೆ. ಈ ಜಾಗಗಳಲ್ಲಿ ಸಾರ್ವಜನಿಕರ ಅನುಕೂಲಕ್ಕೆ ವಸತಿ, ಆಸ್ಪತ್ರೆ ಹಾಗೂ ಕಾಲೇಜುಗಳ ನಿರ್ಮಾಣಕ್ಕೆ ಚಿಂತನೆ ನಡೆಸಲಾಗಿದೆ ಎಂದು ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಸಚಿವ ಬಿ.ಝಡ್. ಜಮೀರ್ ಅಹಮದ್ ಖಾನ್ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಸಹಯೋಗದಲ್ಲಿ ನಗರದ ಚೋಳಗುಡ್ಡದ ಅಗಸನಕಲ್ಲು ರಸ್ತೆಯಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಅಂಜುಮಾನ್ ಎ ದಾರೂಲ್ ಹುದಾ ಸಂಸ್ಥೆ ಕೊಹೇನೂರ್ ಶಾದಿಮಹಲ್ ನೂತನ ಕಟ್ಟಡದ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು.

ವಕ್ಫ್ ಬೋರ್ಡ್ ಆಸಿಗಳನ್ನು ಸರಿಯಾದ ರೀತಿಯಲ್ಲಿ ನಿರ್ವಹಣೆ ಮಾಡಿದರೆ, ಸರ್ಕಾರದ ಅನುದಾನಕ್ಕೆ ಕಾಯುವ ಅವಶ್ಯಕತೆ ಬರುವುದಿಲ್ಲ. ಅಲ್ಪಸಂಖ್ಯಾತರ ಅಭಿವೃದ್ಧಿ ಬಯಸಿ ಜನರು ನನ್ನನ್ನು ಹರಿಸಿದ್ದಾರೆ. ಇದರಿಂದಾಗಿ ಸರ್ಕಾರದಲ್ಲಿ ಸಚಿವ ಸ್ಥಾನ ಲಭಿಸಿದೆ. ಜನರ ಅಭಿವೃದ್ಧಿಗೆ ಸದಾ ಶ್ರಮಿಸುತ್ತೇನೆ ಎಂದರು.

ಅಲ್ಪಸಂಖ್ಯಾತ ಸಮುದಾಯದ ಜನರು



ತಮ್ಮ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಬೇಕು. ಶಿಕ್ಷಣದಿಂದ ಮಾತ್ರ ಪ್ರಗತಿ ಸಾಧ್ಯ. ನಮ್ಮ ಹಣೆ ಬರಹ ಇಷ್ಟೇ ಎಂದು ಕೈ ಕಟ್ಟಿ ಕೂರಬಾರದು. ಡ್ರೈವರ್, ಮೆಕಾನಿಕ್, ಹಮಾಲಿ, ಕೂಲಿ ಕೆಲಸ ಮಾಡುವವರರ ಮಕ್ಕಳು ಅದೇ ವೃತ್ತಿ ಮಾಡಬೇಕು ಎಂದೇನೂ ಇಲ್ಲ. ಕಷ್ಟಪಟ್ಟು ದುಡಿದರೆ ಪ್ರತಿಫಲ ದೊರಕುವುದು ಎಂದು ಸಚಿವ ಜಮೀರ್ ಅಹಮದ್ ಹೇಳಿದರು.

ಚಿತ್ರದುರ್ಗ ನಗರದ ಜನತೆಯ ಬಹುದಿನಗಳಕನಸು ಇಂದು ನನಸಾಗುತ್ತಿದೆ. ನಾಲ್ಕು ತಿಂಗಳಿಂದ ಶಾಸಕರಾದ ವೀರೇಂದ್ರ ಪಪ್ಪಿಯವರು ಇಲ್ಲಿನ ಶಾದಿ ಮಹಲ್ ನಿರ್ಮಾಣದ ಬಗ್ಗೆ ಹತ್ತಾರು ಬಾರಿ ಮನವಿ ಮಾಡಿದ್ದರು. ಅವರ ಕಳಕಳಿಯಂತೆ ಕೊಹೇನೂರ್ ಶಾದಿಮಹಲ್ ನೂತನ ಕಟ್ಟಡದ ನಿರ್ಮಾಣಕ್ಕೆ ರೂ. 2 ಕೋಟಿ ಮಂಜೂರು ಮಾಡಿದ್ದೇನೆ. ಜಿಲ್ಲೆಯ ನಿರ್ಮಾಣ ಹಂತದಲ್ಲಿ ಇದ್ದ ಶಾದಿ ಮಹಲ್ ಕಟ್ಟಡಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆ. ವಕ್ಫ್ ಬೋರ್ಡ್ ಮುಸ್ಲಿಂ ಸಮುದಾಯದ ಅಭಿವೃದ್ಧಿಗಾಗಿ ಶ್ರಮಿಸಬೇಕು. ಚಿತ್ರದುರ್ಗ ನಗರದ ಅನ್ವರ್ ಭಾಷಾ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ. ಇವರ ಸಹಕಾರದಲ್ಲಿ ಮುಂದಿನ ಅಭಿವೃದ್ಧಿ ಕಾರ್ಯಗಳನ್ನು ಮಾಡಲಾಗುವುದು. ಪ್ರಾಥಮಿಕ ಶಿಕ್ಷಣ ಪಡೆಯುತ್ತಿರುವ 5 ಲಕ್ಷ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಸರ್ಕಾರದಿಂದ ವಿದ್ಯಾರ್ಥಿ ವೇತನ ನೀಡಲಾಗುತ್ತದೆ. ದಂತ ವೈದ್ಯಕೀಯ ಓದುವ ವಿದ್ಯಾರ್ಥಿಗಳಿಗೆ ರೂ.1 ಲಕ್ಷ, ಇಂಜಿನಿಯರಿಂಗ್ ಓದುವ ವಿದ್ಯಾರ್ಥಿಗಳಿಗೆ ರೂ.50 ಸಾವಿರ, ವಿದೇಶದಲ್ಲಿ ಅಭ್ಯಾಸ ಮಾಡುವ ವಿದ್ಯಾರ್ಥಿಗಳಿಗೆ ರೂ.30 ಲಕ್ಷ ಹಣವನ್ನು ಸಬ್ಸಿಡಿ ಬಡ್ಡಿದರದಲ್ಲಿ ಸಾಲ ಸೌಲಭ್ಯ ನೀಡಲಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಮಾತನಾಡಿ, ನವ ಚಿತ್ರದುರ್ಗ ನಿರ್ಮಾಣಕ್ಕೆ ಮುನ್ನುಡಿ ಬರೆಯಲಾಗಿದೆ. ಚಿತ್ರದುರ್ಗ ಹಲವಾರು ಅಭಿವೃದ್ಧಿ ಕಾರ್ಯದ ಕಡೆ ಮುನ್ನಡೆಯುತ್ತದೆ. ಸಚಿವರಾದ ಜಮೀರ್ ಅಹಮದ್ ಖಾನ್ ಅವರು ಚಿತ್ರದುರ್ಗ ತಾಲೂಕಿಗೆ 1500 ಹೊಸ ಮನೆಗಳನ್ನು ವಸತಿ ಇಲಾಖೆಯಿಂದ ನೀಡಿದ್ದಾರೆ ಎಂದರು.ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ. ಅನ್ವರ್ ಭಾಷಾ, ನಗರ ಸಭೆ ಸದಸ್ಯ ಸರ್ದಾರ್, ಮಾಜಿ ಸಂಸದ ಚಂದ್ರಪ್ಪ, ಅಂಜುಮಾನ್ ಎ ದಾರೂಲ್ ಹುದಾ ಇದ್ದರು.

### ತಾಲ್ಲೂಕು ಆರೋಗ್ಯಾಧಿಕಾರಿ ಎನ್.ಎಸ್.ಮಂಜುನಾಥ್

# ಪಿಎಂಜೆಎವೈ ಮಹಾತ್ವಾಂಕ್ಷೆ ಯೋಜನೆ

» ಚಿತ್ರದುರ್ಗ

ಆಯುಷ್ಮಾನ್ ಭಾರತ್ ಪ್ರಧಾನಮಂತ್ರಿ ಜನಾರೋಗ್ಯ ಯೋಜನೆ (ಪಿಎಂಜೆಎವೈ) ಒಂದು ಮಹಾತ್ವಾಂಕ್ಷೆ ಯೋಜನೆಯಾಗಿದೆ ಎಂದು ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್ ಹೇಳಿದರು.

ಚಿತ್ರದುರ್ಗ ತಾಲೂಕಿನ ಸಿರಿಗೆರೆ ಬಿಎಲ್ಆರ್ ಪದವಿ ಪೂರ್ವ ಕಾಲೇಜಿನಲ್ಲಿ ಮಂಗಳವಾರ ವಿದ್ಯಾರ್ಥಿಗಳಿಗೆ ರಸಪ್ರಶ್ನೆ ಕಾರ್ಯಕ್ರಮ ಸ್ಪರ್ಧೆ ಏರ್ಪಡಿಸುವ ಮುನ್ನ ಪ್ರಾಸ್ತಾವಿಕವಾಗಿ ಆರೋಗ್ಯ ಸೇವೆಗಳ ಕುರಿತು ಅವರು ಮಾತನಾಡಿದರು.

ಆಯುಷ್ಮಾನ್ ಭಾರತ್ ಪ್ರಧಾನ ಮಂತ್ರಿ ಜನಾರೋಗ್ಯ ಯೋಜನೆ ಗಂಭೀರ ಸ್ವರೂಪದ ಕಾಯಿಲೆಗಳಾದ ಹೃದಯದ ತೊಂದರೆ, ಅಪಘಾತ, ನವಜಾತ ಶಿಶುಗಳಿಗೆ ಸಂಬಂಧಿಸಿದ ಕಾಯಿಲೆಗಳು, ನರರೋಗ, ಮೂತ್ರಪಿಂಡದ ಕಾಯಿಲೆ ಇಂತಹ ಗಂಭೀರ ಕಾಯಿಲೆಗಳಿಗೆ ಬಿಪಿಎಲ್ ಕುಟುಂಬದ ಸದಸ್ಯರಿಗೆ ವರ್ಷಕ್ಕೆ ರೂ.5 ಲಕ್ಷದವರೆಗೆ ಮತ್ತು ಎಪಿಎಲ್ ಕುಟುಂಬದವರಿಗೆ ಶೇ.30ರಷ್ಟು ಉಚಿತ ಶಸ್ತ್ರ ಚಿಕಿತ್ಸಾ ಸೌಲಭ್ಯ, ಮೇಲ್ದರ್ಜೆ ಸರ್ಕಾರಿ ಆಸ್ಪತ್ರೆಗಳಲ್ಲಿ ಮತ್ತು ಅನುದಾನಿತ ಖಾಸಗಿ ಆಸ್ಪತ್ರೆಗಳಲ್ಲಿ ಲಭ್ಯವಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆಸಿಕೊಳ್ಳಬೇಕೆಂದರು.

ಮಾಹಿತಿ ಶಿಕ್ಷಣ ಒಂದು ಉಪಯುಕ್ತವಾಗಿದೆ. ಪದವಿಪೂರ್ವ ಕಾಲೇಜು ವಿದ್ಯಾರ್ಥಿಗಳಿಗೆ ರಸಪ್ರಶ್ನೆ ಕಾರ್ಯಕ್ರಮದ ಮೂಲಕ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಬಗ್ಗೆ ಅರಿವು



ಮೂಡಿಸಿ ಸಾರ್ವಜನಿಕ ವಲಯದಲ್ಲಿ ಆರೋಗ್ಯ ಸೇವೆಗಳ ಮಾಹಿತಿ ದೊರಕಿದಂತಾಗುತ್ತದೆ ಎಂದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ. ಮೂಗಪ್ಪ ಮಾತನಾಡಿ, ಗ್ರಾಮಗಳಲ್ಲಿ ಮತ್ತು ಗ್ರಾಮ ಪಂಚಾಯಿತಿ ಹಾಗೂ ಹೋಬಳಿ ಮಟ್ಟದಲ್ಲಿ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳು ಲಭ್ಯವಿದ್ದು, ಆ ಕೇಂದ್ರಗಳಲ್ಲಿ ಅಸಾಂಕ್ರಾಮಿಕ ರೋಗಗಳ ಪರೀಕ್ಷೆ, ಯೋಗ ಸೇರಿದಂತೆ ಸಣ್ಣಪುಟ್ಟ ಆರೋಗ್ಯ ಸಮಸ್ಯೆಗಳಿಗೆ ಉಚಿತ ಚಿಕಿತ್ಸಾ ಸೌಲಭ್ಯ ಲಭ್ಯವಿದ್ದು, ಹೆಚ್ಚಿನ ಮಾಹಿತಿಗಾಗಿ ಉಚಿತ ಆರೋಗ್ಯ ಸಹಾಯವಾಣಿ 104ಕ್ಕೆ ಕರೆ ಮಾಡಬಹುದು ಎಂದರು.

ಮುಖ್ಯ ಆರೋಗ್ಯ ಮೇಲ್ವಿಚಾರಣಾ ಅಧಿಕಾರಿ ಎಂ.ಬಿ.ಹನುಮಂತಪ್ಪ ಮಾತನಾಡಿ, ವಿದ್ಯಾರ್ಥಿಗಳು ಸರ್ಕಾರದಿಂದ ಸಿಗುವ ಆರೋಗ್ಯ ಸೇವೆಗಳ ಬಗ್ಗೆ ಮಾಹಿತಿಯನ್ನು ಪಡೆದು ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಿ. ಬಹುಮಾನ ಮುಖ್ಯವಲ್ಲ, ಮಾಹಿತಿಯ ಕಡೆ ಹೆಚ್ಚು ಗಮನ ಹರಿಸಿ, ಗಂಭೀರ ಕಾಯಿಲೆಗಳಿಗೆ ಉಚಿತ ಶಸ್ತ್ರಚಿಕಿತ್ಸೆಯ ಮುಖಾಂತರ ಆರೋಗ್ಯ ಸೇವೆ ಪಡೆದು ಆರೋಗ್ಯ ಕಾಪಾಡಿಕೊಳ್ಳಬೇಕೆಂದರು.

ಈ ಸಂದರ್ಭದಲ್ಲಿ ಸಿರಿಗೆರೆ ಬಿಎಲ್ಆರ್ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಬಣಕಾರ್ ಮತ್ತು ಆರೋಗ್ಯ ನಿರೀಕ್ಷಣಾಧಿಕಾರಿ ಸುನಿಲ್ ಕುಮಾರ್, ಕಾಲೇಜಿನ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

## ವಿಕಲಚೇತನರ ಕ್ಷೇತ್ರದಲ್ಲಿ ಸಾಧನೆಗೈದ ವ್ಯಕ್ತಿ, ಸಂಸ್ಥೆಗಳಿಂದ ರಾಜ್ಯ ಪ್ರಶಸ್ತಿಗೆ ಅರ್ಜಿ

» ದಾವಣಗೆರೆ

ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ ಪ್ರಸಕ್ತ ಸಾಲಿನಲ್ಲಿ ವಿಕಲಚೇತನರ ಕ್ಷೇತ್ರದಲ್ಲಿ ಸಾಧನೆಗೈದ ವ್ಯಕ್ತಿ, ಸಂಸ್ಥೆ ಮತ್ತು ವಿಶೇಷ ಶಾಲೆಗಳಲ್ಲಿ 15 ವರ್ಷಗಳಿಗೂ ಮೇಲ್ಪಟ್ಟು ಸೇವೆ ಸಲ್ಲಿಸಿರುವ ಹಾಗೂ ಸೇವೆಯಲ್ಲಿರುವ ಶಿಕ್ಷಕರಿಗೆ ರಾಜ್ಯ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ನಿಗಧಿತ ನಮೂನೆಗಳನ್ನು ಇಲಾಖೆಯ ವೆಬ್‌ಸೈಟ್ WWW. dwdsc.kar.nic.in ಮೂಲಕ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಅಕ್ಟೋಬರ್ 25 ರೊಳಗಾಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾ ಇಲಾಖೆ ಕಚೇರಿಗೆ ಸಲ್ಲಿಸಬೇಕು.ಹೆಚ್ಚಿನ ಮಾಹಿತಿಗಾಗಿ ದೂ.08192-263936 ಸಂಪರ್ಕಿಸಬಹುದಾಗಿದೆ.

## ಬಡರೋಗಿಗಳಿಗೆ ವಿಶೇಷ ಪ್ಯಾಕೇಜ್ ಒದಗಿಸಿದ ಕೀರ್ತಿ ಆಸ್ಪತ್ರೆ




ಚಿತ್ರದುರ್ಗ ನಗರದಲ್ಲಿ ವಿ.ಪಿ.ಎಕ್ಸ್ಟೇಷನ್ ಮುಖ್ಯ ರಸ್ತೆಯಲ್ಲಿರುವ ಕೀರ್ತಿ ಆಸ್ಪತ್ರೆಯಲ್ಲಿ ಅತಿ ಕಡಿಮೆ ಅವಧಿಯಲ್ಲಿ ಅತ್ಯಾಧುನಿಕ ಚಿಕಿತ್ಸೆ ಮೂಲಕ ಜಿಲ್ಲೆಯಾದ್ಯಂತ ಹೆಚ್ಚು ಜನಪ್ರಿಯತೆ ಗಳಿಸಿದೆ.ಹೌದು ಕಳೆದ ಮಹಿಳೆ ದಿನಾಚರಣೆ ಸಂದರ್ಭದಲ್ಲಿ ಉಚಿತ ತಪಾಸಣೆ ಮೂಲಕ ಬಡ ರೋಗಿಗಳಿಗೆ ನೆರವಾಗಿ ಹೆಚ್ಚು ಜನಮನ್ನಣೆ ಗಳಿಸಿದ್ದು ಬಡರೋಗಿಗಳಿಗಾಗಿ ಕೀರ್ತಿ ಆಸ್ಪತ್ರೆ ಮತ್ತೊಂದು ಯೋಜನೆಯನ್ನು ನಿಯಮಿತವ ರೋಗಿಗಳಿಗೆ ನೀಡುವ ಮೂಲಕ ಬಡವರ ಪರ ಕಾಳಜಿ ತೋರುವ ಕೆಲಸ ಕೀರ್ತಿ ಆಸ್ಪತ್ರೆ ಮಾಡಿದೆ.

**ಈ ಶುಲ್ಕ ಬಡರೋಗಿಗಳಿಗೆ ಮಾತ್ರ**

- **ನಾರ್ಮಲ್ ಡೆಲಿವರಿ (ಸಹಜ ಹೆರಿಗೆ)-15.000rs**
- **ಸಿಜೇರಿಯನ್ ಹೆರಿಗೆ - 40.000rs**
- **ಹಿಸ್ಟರೆಕ್ಟಮಿ (ಓಪನ್, ಲ್ಯಾಪರೊಸ್ಕೋಪಿ)-40.000rs**

ಕೀರ್ತಿ ಇಂತಿಷ್ಟು ಬೆಡ್ ಗಳನ್ನು ಬಡರೋಗಿಗಳಿಗಾಗಿ ನೀಡಲಾಗುತ್ತದೆ. ಹೆಚ್ಚು ಜನಪ್ರಿಯತೆಯನ್ನು ಪಡೆದಿರುವ ಕೀರ್ತಿ ಆಸ್ಪತ್ರೆಯ ಡಾ.ಮಲ್ಲಿಕಾರ್ಜುನ ಕೀರ್ತಿ ಅವರು ಬಡರೋಗಿಗಳ ಬಗ್ಗೆ ವಿಶೇಷ ಕಾಳಜಿ ಹೊಂದಿದ್ದಾರೆ.

**ನಮ್ಮ ಸೇವೆಯಲ್ಲಿ ಬಡವರಿಗಾಗಿ ಒಂದಿಷ್ಟು ರಿಯಾಯಿತಿ ದರದಲ್ಲಿ ಚಿಕಿತ್ಸೆ ನೀಡುವ ಹಂಬಲ ನಮಗಿದೆ. ಅದಕ್ಕಾಗಿ ನಮ್ಮಲ್ಲಿರುವ ಬೆಡ್ ವ್ಯವಸ್ಥೆಯಲ್ಲಿ ಬಡರೋಗಿಗಳಿಗೆ ಕಡಿಮೆ ದರದಲ್ಲಿ ಚಿಕಿತ್ಸೆ ಸೌಲಭ್ಯ ನೀಡಲಾಗುತ್ತದೆ. ಆದರೆ ಮೀಸಲಿಟ್ಟ ಬೆಡ್ ನಲ್ಲಿ ಖಾಲಿ ಇದ್ದರೆ ಸೇವೆ ಒದಗಿಸಲಾಗುತ್ತದೆ ಎಂದು ಸ್ಪಷ್ಟವಾಗಿ ತಿಳಿಸಿದ್ದೇವೆ. ನಾವು ಬಡವರಿಂದ ಅಗತ್ಯ ದಾಖಲೆ ಪಡೆದು ಚಿಕಿತ್ಸೆ ನೀಡಲಾಗುತ್ತದೆ.**

» **ಡಾ.ಮಲ್ಲಿಕಾರ್ಜುನ ಕೀರ್ತಿ, ಕೀರ್ತಿ ಆಸ್ಪತ್ರೆ ಚಿತ್ರದುರ್ಗ**

ಪ್ರಮುಖ ಸುದ್ದಿ

# ಯೋಧರ ಸ್ಮಾರಕ ನಿರ್ಮಾಣಕ್ಕೆ "ಅಮೃತ ಕಳಶ"ಯಾತ್ರೆ

» ಚಿತ್ರದುರ್ಗ

ಚಿತ್ರದುರ್ಗ ನಗರದ ಸರ್ಕಾರಿ ಕಲಾ ಕಾಲೇಜು ಮುಂಭಾಗದ ಮೈದಾನದಲ್ಲಿ ಮಂಗಳವಾರ ಆಜಾದಿ ಕಾ ಅಮೃತ ಮಹೋತ್ಸವದ ಅಂಗವಾಗಿ ದೇಶಕ್ಕಾಗಿ ತ್ಯಾಗ ಮಾಡಿದ ವೀರ ಯೋಧರಿಗೆ ಗೌರವ ಸಮರ್ಪಿಸಲು "ನನ್ನ ಮಣ್ಣು ನನ್ನ ದೇಶ" ಕಾರ್ಯಕ್ರಮದ ಭಾಗವಾಗಿ ಚಿತ್ರದುರ್ಗ ತಾಲ್ಲೂಕಿನ ಎಲ್ಲಾ ಗ್ರಾಮಗಳ ಮನೆ ಮನೆಗಳಿಂದ ಸಂಗ್ರಹಿಸಿದ ಮಣ್ಣಿನ "ಅಮೃತ ಕಳಶ" ಯಾತ್ರೆಗೆ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಚಾಲನೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ನೆಹರು ಯುವ ಕೇಂದ್ರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸರ್ಕಾರಿ ಕಲಾ ಮತ್ತು ವಾಣಿಜ್ಯ ಕಾಲೇಜು ಇವರ ಸಂಯುಕ್ತಾಶ್ರಯದಲ್ಲಿ ನನ್ನ ಮಣ್ಣು ನನ್ನ ದೇಶ-ಮಣ್ಣಿನ ನಮನ ವೀರ ಯೋಧರಿಗೆ ವಂದನ "ತಾಲ್ಲೂಕುಮಟ್ಟದ



ಅಮೃತ ಕಳಶ ಯಾತ್ರೆ" ಕಾರ್ಯಕ್ರಮದಲ್ಲಿ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅವರು ಕಳಶಕ್ಕೆ ಮಣ್ಣು ಹಾಕಿಸುವ, ಧ್ವಜಾರೋಹಣ ಮತ್ತು ಮಾಜಿ ಸೈನಿಕರಿಗೆ ಸನ್ಮಾನ ಮಾಡಿದರು.

75 ನೇ ಸ್ವಾತಂತ್ರ್ಯದ ಅಮೃತ ಮಹೋತ್ಸವ ಅಂದರೆ ಆಜಾದಿ ಕಾ ಅಮೃತ ಮಹೋತ್ಸವದ ಅಂಗವಾಗಿ ದೇಶಕ್ಕಾಗಿ ತ್ಯಾಗ ಮಾಡಿದ ವೀರ ಯೋಧರಿಗೆ ಗೌರವ ಸಲ್ಲಿಸಲು, ಒಂದೇ ಭಾರತ ಶ್ರೇಷ್ಠ ಭಾರತ ಎಂದು ಸಾರಲು ಮತ್ತು ಮನೆ ಮನಗಳಲ್ಲಿ ದೇಶಭಕ್ತಿ ತುಂಬಲು ನನ್ನ ಮಣ್ಣು ನನ್ನ ದೇಶ ಕಾರ್ಯಕ್ರಮವನ್ನು ದೇಶವ್ಯಾಪಿ ಹಮ್ಮಿಕೊಳ್ಳಲಾಗಿದೆ. ಈಗಾಗಲೆ ಸ್ವಾತಂತ್ರ್ಯೋತ್ಸವದಂದು ಪ್ರತಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಅಥವಾ ಅಮೃತ ಸರೋವರ ದಂಡೆಯ ಮೇಲೆ ದೇಶಕ್ಕಾಗಿ ತ್ಯಾಗ ಮಾಡಿದ ವೀರ ಯೋಧರ ಸ್ಮರಣಾರ್ಥ ಸ್ಮಾರಕ ಮಾಡಲಾಗಿದೆ ಹಾಗೂ 75ನೇ ಸ್ವಾತಂತ್ರ್ಯ ಮಹೋತ್ಸವದ ನೆನಪಿಗೆ 75 ಸ್ಥಳೀಯ ಔಷಧೀಯ ಸಸ್ಯಗಳ ವಾಟಿಕೆ ಅನುಷ್ಠಾನ ಮಾಡಲಾಗುತ್ತಿದೆ. ಪ್ರತಿ ಗ್ರಾಮಗಳ ಮನೆ ಮನೆಗಳಿಂದ ಅಕ್ಕಿ, ಮಣ್ಣು ಸಂಗ್ರಹಿಸಿ, ಒಟ್ಟು ಸಂಗ್ರಹಿಸಿದ ಮಣ್ಣಿನ ಅಮೃತ ಕಳಶವನ್ನು ವೈಭವೋಪೇತವಾಗಿ ಸಕಲ ಗೌರವಗಳಿಂದ ಶಾಲಾ ಮಕ್ಕಳೊಡಗೂಡಿ ಮೆರವಣಿಗೆ ಮಾಡಿ 75ನೇ ಅಮೃತ ಮಹೋತ್ಸವದ ನೆನಪು ಹಾಗೂ ದೇಶಕ್ಕಾಗಿ ತ್ಯಾಗ ಮಾಡಿದವರ ಗೌರವಾರ್ಥ ಮತ್ತು ದೇಶಭಕ್ತಿಗೆ ಪೂರಕ ಪ್ರವಚನ, ದೇಶಭಕ್ತಿ ಮೂಡಿಸುವ ಕಾರ್ಯಕ್ರಮ ಆಯೋಜಿಸಿ ಅಮೃತ ಕಳಶವನ್ನು ಸಕಲ ಗೌರವಗಳಿಂದ ಮೆರವಣಿಗೆ ಮಾಡಲಾಯಿತು.

ದೇಶದ ಮೂಲೆ ಮೂಲೆಯಿಂದ ಬಂದ ಅಮೃತ ಕಳಶದ ಮಣ್ಣಿನಿಂದ ಕೇಂದ್ರದ ರಾಷ್ಟ್ರೀಯ ಯುದ್ಧ ಸ್ಮಾರಕ ಭವನದ ಹತ್ತಿರ ದೇಶಕ್ಕಾಗಿ ತ್ಯಾಗ ಮಾಡಿದ ವೀರ ಯೋಧರ ಗೌರವಾರ್ಥವಾಗಿ ಸ್ಮಾರಕ ಮತ್ತು 75ನೇ ಸ್ವಾತಂತ್ರ್ಯೋತ್ಸವದ ಸವಿ ನೆನಪಿನ ಉದ್ಯಾನವನ, ವಾಟಿಕ ನಿರ್ಮಾಣ ಮಾಡಲಾಗುತ್ತದೆ. ಕಾರ್ಯಕ್ರಮದಲ್ಲಿ ತಾ ಪಂ ಕಾರ್ಯನಿರ್ವಾಹಕ ಅಧಿಕಾರಿ ಹೆಚ್ ಹನುಮಂತಪ್ಪ, ಶಿಕ್ಷಣ ಇಲಾಖೆಯ ಬಿಇಒ ನಾಗಭೂಷಣ್, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಹುಲಿಕುಂಟರಾಯಪ್ಪ, ಜಿಲ್ಲಾ ಪಂಚಾಯತಿ ಸಿಬ್ಬಂದಿ, ಸರ್ಕಾರಿ ಕಲಾ ಮತ್ತು ವಾಣಿಜ್ಯ ಕಾಲೇಜಿನ ಪ್ರಾಂಶುಪಾಲ ತಿಪ್ಪೇರುದ್ರಪ್ಪ ಮತ್ತು ಇತರೆ ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳು, ತಾ. ಪಂ. ಸಹಾಯಕ ನಿರ್ದೇಶಕರಾದ ಯರ್ರಿಸ್ವಾಮಿ ಮತ್ತು ರೂಪಕುಮಾರಿ, ತಾ ಪಂ ಸಿಬ್ಬಂದಿ, ನರೇಗಾ ಸಿಬ್ಬಂದಿಗಳು, ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಸಿಬ್ಬಂದಿಗಳು, ಕಲಾ ತಂಡಗಳು, ಮಾಜಿ ನಿವೃತ್ತ ಸೈನಿಕರು, ಸಾರ್ವಜನಿಕರು ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T